# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 54 | ಆರ್‌ಎನ್‌ಐ ನಂ: ಕೆಎಆರ್‌ಕೆಎನ್/2023/88462 | ಚಿತ್ರದುರ್ಗ | ದಿನಾಂಕ: 10–09–2024 ಮಂಗಳವಾರ | ಪುಟ: 4 | ಬೆಲೆ : ರೂ.2–00
Volume - 02 Issue - 54 | RNI No: KARKAN/2023/88462 | Chitradurga | Date: 10-09-2024 Tuesday | Page: 4 | Price: Rs. 2-00



ಒಳಪುಟದ ಸುದ್ದಿಗಳು
ಜಯದೇವ ಶ್ರೀ 150ನೇ ಜಯಂತ್ಯೋತ್ಸವ: ಕ್ರೀಡಾ ಜಾತ್ರೆ 2
ಮಹಾರಾಷ್ಟ್ರ ಮೂಲದ ಕಾರ್ಮಿಕ ಸಾವು: ಜಿಲ್ಲಾ ರಕ್ಷಣಾಧಿಕಾರಿ ಭೇಟಿ 3
ತಾಲ್ಲೂಕು ಮಟ್ಟದ ಕ್ರೀಡಾಕೂಟ ಬಾಪೂಜಿ ಕಾಲೇಜಿನ ಆಟಗಾರರಿಗೆ ಪ್ರಥಮ ಸ್ಥಾನ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಸಾಲಬಾಧೆ ರೈತ ಆತ್ಮಹತ್ಯೆ

» ಹೊಸದುರ್ಗ

ಸಾಲದಬಾಧೆಯನ್ನ ತಾಳಲಾರದೆ ರೈತನೋರ್ವ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ತಾಲೂಕಿನ ದೇವಪುರ ಗ್ರಾಮದ ಹೊರವಲಯದಲ್ಲಿ ಸಂಭವಿಸಿದೆ. ಮೃತ ರೈತನನ್ನು ತಾಲೂಕಿನ ದೇವಪುರ ಗ್ರಾಮದ ಹಳದಪ್ಪ ಎಂಬುವವರ ಪುತ್ರ ರಾಜಪ್ಪ (53) ಎಂದು ಗುರುತಿಸಲಾಗಿದ್ದು.ರೈತ ರಾಜಪ್ಪನ ತಂದೆಯ ಹೆಸರಿನಲ್ಲಿ ಸರ್ವೆ ನಂಬರ್ 155 ರಲ್ಲಿ ಎರಡು ಎಕರೆ ಜಮೀನಿದ್ದು ಇದರ ಜೊತೆಗೆ ನಾಲ್ಕು ಎಕರೆ ಗುತ್ತಿಗೆ ಆಧಾರದ ಮೇಲೆ ಬೇರೆಯವರ ಜಮೀನನ್ನ ಉಳುಮೆ ಮಾಡುತ್ತಿದ್ದರು ಈ ಎರಡೂ ಜಮೀನನಲ್ಲಿ ಬೆಳೆದ ಬೆಳೆಯಿಂದ ಯಾವುದೇ ಲಾಭ ಬಂದಿರಲಿಲ್ಲ ಜಮೀನಿನಲ್ಲಿ ಬೆಳೆ ಬೆಳೆಯುವ ಸಲುವಾಗಿ ದೇವಪುರ ಕೆನರಾ ಬ್ಯಾಂಕಿನಲ್ಲಿ ಒಡವೆ ಅಡವಿಟ್ಟು ಎರಡು ಲಕ್ಷ ರೂ, ದೇವಪುರ ಕೃಷಿ ಸಹಕಾರ ಪತ್ತಿನ ಬ್ಯಾಂಕಿನಲ್ಲಿ 90 ಸಾವಿರ ಸಾಲ, ಕೈಗಡ ನಾಲ್ಕು ಲಕ್ಷ ಸಾಲ ಮಾಡಿದ್ದು ಈ ವಿಚಾರವಾಗಿ ಜಿಗುಪ್ಸೆಗೊಂಡಿದ್ದ ರಾಜಪ್ಪ ಸೆ.8 ರಂದು ಭಾನುವಾರ ದೇವಪುರ ಗ್ರಾಮದ ಹೊರವಲಯದ ಜಮೀನೊಂದರಲ್ಲಿ ಮರಕ್ಕೆ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದು ಈ ಬಗ್ಗೆ ಹೊಸದುರ್ಗ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿ: ಅರ್ಜಿ ಆಹ್ವಾನ

» ಚಿತ್ರದುರ್ಗ

2024–25ನೇ ಸಾಲಿನಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿಯನ್ನು ನೀಡಲು ಅರ್ಹ ವ್ಯಕ್ತಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. 2024ರ ಅಕ್ಟೋಬರ್ 17ರಂದು ನಡೆಯುವ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯಂದು ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿಯನ್ನು ರಾಜ್ಯಮಟ್ಟದಲ್ಲಿ ನೀಡಲು ಪರಿಶಿಷ್ಟ ವರ್ಗದ ಜನಾಂಗದವರ ಏಳಿಗೆಗಾಗಿ ಶ್ರಮಿಸಿದ ಅರ್ಹ ವ್ಯಕ್ತಿಗಳು, ಸ್ವಯಂ ಘೋಷಿತ ಅರ್ಜಿ ಮತ್ತು ದಾಖಲೆಗಳನ್ನು ದ್ವಿಪ್ರತಿಯಲ್ಲಿ ಸೆಪ್ಟೆಂಬರ್ 16 ರ ಸಂಜೆಯೊಳಗಾಗಿ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ, ಚಿತ್ರದುರ್ಗ ಅಥವಾ ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ ಚಿತ್ರದುರ್ಗ ಇವರಿಗೆ ಪೂರ್ಣ ಮಾಹಿತಿಯೊಂದಿಗೆ ಅರ್ಜಿ ಸಲ್ಲಿಸುವಂತೆ ಚಿತ್ರದುರ್ಗ ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಕೋರಿದ್ದಾರೆ.

### ಸೆ.11 ಮತ್ತು 12ರಂದು ಜಿಲ್ಲಾ ಮಟ್ಟದ ಪದವಿ ಪೂರ್ವ ಕಾಲೇಜುಗಳ ಕ್ರೀಡಾ ಕೂಟ

» ಚಿತ್ರದುರ್ಗ

ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಹಾಗೂ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜು ವತಿಯಿಂದ ಇದೇ ಸೆ.11 ಮತ್ತು 12ರಂದು ಚಿತ್ರದುರ್ಗ ಜಿಲ್ಲಾ ಮಟ್ಟದ ಪದವಿಪೂರ್ವ ಕಾಲೇಜುಗಳ ಕ್ರೀಡಾಕೂಟ ಆಯೋಜಿಸಲಾಗಿದ್ದು, ಸೆ.11ರಂದು ಬೆಳಿಗ್ಗೆ 10ಕ್ಕೆ ನಗರದ ಒನಕೆ ಓಬವ್ವ ಕ್ರೀಡಾಂಗಣದಲ್ಲಿ ಉದ್ಘಾಟನಾ ಸಮಾರಂಭ ಹಮ್ಮಿಕೊಳ್ಳಲಾಗಿದೆ. ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಕಾರ್ಯಕ್ರಮ ಉದ್ಘಾಟಿಸುವರು. ಶಾಸಕ ಕೆ.ಸಿ.ವೀರೇಂದ್ರ (ಪಪ್ಪಿ) ಅಧ್ಯಕ್ಷತೆ ಹಾಗೂ ಧ್ವಜಾರೋಹಣ ನೆರವೇರಿಸುವರು. ಸಂಸದ ಗೋವಿಂದ ಎಂ ಕಾರಜೋಳ ಘನ ಉಪಸ್ಥಿತಿ ವಹಿಸುವರು. ಮುಖ್ಯ ಅತಿಥಿಗಳಾಗಿ ಶಾಸಕರಾದ ಬಿ.ಜಿ.ಗೋವಿಂದಪ್ಪ, ಟಿ.ರಘುಮೂರ್ತಿ, ಎನ್.ವೈ.ಗೋಪಾಲಕೃಷ್ಣ, ಡಾ.ಎಂ.ಚಂದ್ರಪ್ಪ, ವಿಧಾನ ಪರಿಷತ್ ಸದಸ್ಯರಾದ ಡಿ.ಟಿ.ಶ್ರೀನಿವಾಸ್, ಚಿದಾನಂದ ಎಂ ಗೌಡ, ಕೆ.ಎಸ್.ನವೀನ್, ಶಾಲಾ ಶಿಕ್ಷಣ ಇಲಾಖೆ (ಪದವಿಪೂರ್ವ) ಉಪನಿರ್ದೇಶಕ ಆರ್.ಪುಟ್ಟಸ್ವಾಮಿ, ಬಾಲಕರ ಸರ್ಕಾರಿ ಪದವಿಪೂರ್ವ ಕಾಲೇಜು ಅಭಿವೃದ್ಧಿ ಸಮಿತಿ ಸದಸ್ಯರಾದ ಆರ್.ಮಂಜುನಾಥ್, ಎನ್.ನರಸಿಂಹಮೂರ್ತಿ, ಬಿ.ಆರ್.ಶಿವಕುಮಾರ್, ಮಹೇಶ್ ಬಾಬು, ಪ್ರಾಂಶುಪಾಲರ ಸಂಘದ ಅಧ್ಯಕ್ಷ ಎಸ್.ದೇವೇಂದ್ರಪ್ಪ, ಉಪನ್ಯಾಸಕ ಸಂಘದ ಅಧ್ಯಕ್ಷ ಬಿ.ಆರ್.ಮಲ್ಲೇಶ್, ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕಿ ಸುಚೇತಾ ನೆಲವಿಗಿ, ಕ್ರೀಡಾ ಸಂಚಾಲಕ ಎ.ಎಸ್.ರಂಗಪ್ಪ ಸೇರಿದಂತೆ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಹೆಚ್.ಬಿ.ನರಸಿಂಹಮೂರ್ತಿ ಸೇರಿದಂತೆ ಕಾಲೇಜಿನ ಉಪನ್ಯಾಸಕರು ಹಾಗೂ ಸಿಬ್ಬಂದಿ ವರ್ಗದವರು ಭಾಗವಹಿಸುವರು.

### ಪ್ರಜಾಪ್ರಭುತ್ವಕ್ಕಾಗಿ ಮಾನವ ಸರಪಳಿ ಪೂರ್ವಭಾವಿ ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್

# ಜಿಲ್ಲೆಯಲ್ಲಿ 140 ಕಿ.ಮೀ ಮಾನವ ಸರಪಳಿ ನಿರ್ಮಿಸಿ, ಪ್ರಜಾಪ್ರಭುತ್ವ ಗೌರವಿಸೋಣ

» ಚಿತ್ರದುರ್ಗ



ಅಂತರಾಷ್ಟ್ರೀಯ ಪ್ರಜಾಪ್ರಭುತ್ವದ ಅಂಗವಾಗಿ ಇದೇ ಸೆ.15 ರಂದು ಭಾನುವಾರ ಜಿಲ್ಲೆಯಾದ್ಯಂತ 140 ಕಿ.ಮೀ ಉದ್ದದ ಮಾನವ ಸರಪಳಿ ನಿರ್ಮಿಸಿ, ಪ್ರಜಾಪ್ರಭುತ್ವವನ್ನು ಗೌರವಿಸೋಣ ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಹೇಳಿದರು.

ಮೊಳಕಾಲ್ಮುರು ಪಟ್ಟಣದ ತಾಲ್ಲೂಕು ಆಡಳಿತ ಕಚೇರಿಯಲ್ಲಿ ಸೋಮವಾರ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ–2024ರ ಅಂಗವಾಗಿ ಪ್ರಜಾಪ್ರಭುತ್ವಕ್ಕಾಗಿ ಮಾನವ ಸರಪಳಿ ಕಾರ್ಯಕ್ರಮದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ಅಂತರ್ ರಾಷ್ಟ್ರೀಯ ಪ್ರಜಾಪ್ರಭುತ್ವ ದಿನದ ಅಂಗವಾಗಿ ಕರ್ನಾಟಕ ಉತ್ತರ ತುದಿಯಿಂದ ದಕ್ಷಿಣ ತುದಿಯವರೆಗೆ ಅಂದರೆ ಬೀದರ್‌ನಿಂದ ಚಾಮರಾಜನಗರ ವರೆಗೆ, ಮಾನವ ಸರಪಳಿ ರಚಿಸುವ ಮೂಲಕ ಆಚರಿಸಲು ಸರ್ಕಾರ ನಿರ್ಧರಿಸಿದೆ. ಪ್ರಜಾಪ್ರಭುತ್ವವು ಸಮಾನತೆ, ಸ್ವಾತಂತ್ರ್ಯ ಮತ್ತು ಭ್ರಾತೃತ್ವದ ಆದರ್ಶಗಳು ಭಾರತೀಯ ಸಂವಿಧಾನ ಪೀಠಿಕೆಯ ಭಾಗ. ಆದ್ದರಿಂದ ಮಾನವ ಸರಪಳಿ ನಿರ್ಮಾಣ ಮಾಡುವ ಮೂಲಕ ಪ್ರಜಾಪ್ರಭುತ್ವ ಗೌರವಿಸುವಂತಹ ವಿಭಿನ್ನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಜಿಲ್ಲೆಯ ಮೊಳಕಾಲ್ಮುರು ತಾಲ್ಲೂಕಿನ ಮೇಲಿನ ಕಣಿವೆ ಗ್ರಾಮದಿಂದ ಹಿರಿಯೂರು ತಾಲ್ಲೂಕಿನ ಜವನಗೊಂಡನಹಳ್ಳಿಯವರೆಗೆ ಒಟ್ಟು 140 ಕಿ.ಮೀ ದೂರದವರೆಗೆ ಮಾನವ ಸರಪಳಿ ನಿರ್ಮಾಣ ಮಾಡಿ ಪ್ರಜಾಪ್ರಭುತ್ವ ಗೌರವಿಸೋಣ ಎಂದು ಹೇಳಿದರು.ಪ್ರಜಾಪ್ರಭುತ್ವಕ್ಕಾಗಿ ಮಾನವ ಸರಪಳಿ ಕಾರ್ಯಕ್ರಮಕ್ಕೆ ತಾಲ್ಲೂಕಿನ ಸಾರ್ವಜನಿಕರು, ಸಂಘ ಸಂಸ್ಥೆಯ ಸದಸ್ಯರು, ಜನಪ್ರತಿನಿಧಿಗಳು, ಸರ್ಕಾರಿ ನೌಕರರು ಸೇರಿದಂತೆ ವಿವಿಧ ಸಂಘ ಸಂಸ್ಥೆಯವರು ಭಾಗವಹಿಸುವ ಮೂಲಕ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯ ಪ್ರಜಾಪ್ರಭುತ್ವಕ್ಕಾಗಿ ಮಾನವ ಸರಪಳಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ತಿಳಿಸಿದರು. ಮೊಳಕಾಲ್ಮುರು ಶಾಸಕ ಎನ್.ವೈ.ಗೋಪಾಲಕೃಷ್ಣ ಮಾತನಾಡಿ, ಪ್ರಜಾಪ್ರಭುತ್ವಕ್ಕಾಗಿ ಮಾನವ ಸರಪಳಿ ಕಾರ್ಯಕ್ರಮ ಯಶಸ್ವಿಗೆ ಎಲ್ಲ ಜನಪ್ರತಿನಿಧಿಗಳು, ಸಂಘ ಸಂಸ್ಥೆಗಳು, ಸಂಘಟನೆಗಳ ಅಗತ್ಯ ಸಹಕಾರವಿದೆ. ಕಾರ್ಯಕ್ರಮದ ಯಶಸ್ವಿಗೆ ಅಗತ್ಯ ಸಿದ್ಧತೆ ಮಾಡಿಕೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.ಸಭೆಯಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್, ಉಪ ಕಾರ್ಯದರ್ಶಿ ತಿಮ್ಮಪ್ಪ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ತಾಲ್ಲೂಕು ಪಂಚಾಯಿತಿ ಇಒ ಹನುಮಂತಪ್ಪ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

## ಮಾನವ ಸರಪಳಿ: ಜಿಲ್ಲೆಯಲ್ಲಿ ಲಕ್ಷಕ್ಕೂ ಹೆಚ್ಚು ಜನರು ಭಾಗಿ

» ಚಿತ್ರದುರ್ಗ



ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಸೆ.15ರಂದು ಜಿಲ್ಲೆಯ ಲಕ್ಷಕ್ಕೂ ಹೆಚ್ಚು ಜನರಿಂದ 140 ಕಿ.ಮೀ ವ್ಯಾಪ್ತಿ ಮಾನವ ಸರಪಳಿ ನಿರ್ಮಾಣಗೊಳ್ಳಲಿದೆ ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಹೇಳಿದರು. ಚಳ್ಳಕೆರೆ ತಾಲ್ಲೂಕು ಪಂಚಾಯಿತಿ ಕಾರ್ಯಾಲಯದಲ್ಲಿ ಸೋಮವಾರ ಅಂತರಾಷ್ಟ್ರೀಯ ಪ್ರಜಾಪ್ರಭುತ್ವದ ದಿನಾಚರಣೆ ಮಾನವ ಸರಪಳಿ ನಿರ್ಮಾಣ ಕಾರ್ಯಕ್ರಮದ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು.

ಸರ್ಕಾರ ಬೃಹತ್ ಆಂದೋಲನ ರೂಪಿಸುವ ಮೂಲಕ ಪ್ರಜಾಪ್ರಭುತ್ವಕ್ಕೆ ಶಕ್ತಿ ತುಂಬಲಿದೆ. ಚುನಾಯಿತ ಜನಪ್ರತಿನಿಧಿಗಳು, ಸಂಘ ಸಂಸ್ಥೆಗಳು, ಮಹಿಳಾ ಸಂಘಟನೆಗಳು, ಅಂಗನವಾಡಿ, ಆಶಾ ಕಾರ್ಯಕರ್ತೆಯರು, ವಿದ್ಯಾರ್ಥಿಗಳು, ಸ್ತ್ರೀಶಕ್ತಿ, ಯುವಕ ಸಂಘಗಳು ಪ್ರಜಾಪ್ರಭುತ್ವಕ್ಕಾಗಿ ಮಾನವ ಸರಪಳಿ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮ ಯಶಸ್ವಗೊಳಿಸಬೇಕು. ಚಿತ್ರದುರ್ಗ ಜಿಲ್ಲೆಯಲ್ಲಿ ಮೊಳಕಾಲ್ಮೂರು, ಚಳ್ಳಕೆರೆ, ಹಿರಿಯೂರು ತಾಲ್ಲೂಕುಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸುವ ಅವಕಾಶ ಮಾಡಿಕೊಟ್ಟಿದೆ ಎಂದರು. ಸರ್ಕಾರ ರಾಜ್ಯದ ಜನತೆಯ ಕಲ್ಯಾಣಕ್ಕಾಗಿ ಹಲವಾರು ಯೋಜನೆಗಳನ್ನು ಜಾರಿಗೆ ತರುವ ಮೂಲಕ ಬಡವರ ಸಂಕಷ್ಟಗಳ ನಿವಾರಣೆಗೆ ಪ್ರಾಮಾಣಿಕ ಪ್ರಯತ್ನ ನಡೆಸುತ್ತಿದೆ. ಜನಪರ ಆಡಳಿತ ನೀಡುವಲ್ಲಿ ಯಶಸ್ವಿ ಹೆಜ್ಜೆ ಇಟ್ಟಿದೆ. ಪ್ರಜಾಪ್ರಭುತ್ವದ ಸಂರಕ್ಷಣೆಗಾಗಿ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ, ಪ್ರಜಾಪ್ರಭುತ್ವಕ್ಕಾಗಿ ಮಾನವ ಸರಪಳಿ ನಿರ್ಮಿಸಿ ಜಾಗೃತಿ ಮೂಡಿಸಲಾಗುವುದು ಈ ಕಾರ್ಯಕ್ರಮಕ್ಕೆ ಸರ್ಕಾರಿ ಹಾಗೂ ಸರ್ಕಾರೇತರ ಸಂಸ್ಥೆಗಳು ಸಹಕಾರ ನೀಡಿ ಎಂದು ಮನವಿ ಮಾಡಿದರು. ಶಾಸಕ ಟಿ.ರಘುಮೂರ್ತಿ ಮಾತನಾಡಿ, ಚಳ್ಳಕೆರೆ ವಿಧಾನಸಭಾ ಕ್ಷೇತ್ರದಿಂದ 40 ಸಾವಿರಕ್ಕೂ ಹೆಚ್ಚು ಜನರು ಭಾಗವಹಿಸುವಂತೆ ಕಾರ್ಯಕ್ರಮ ರೂಪಿಸಲಾಗಿದೆ. ಇಂತಹ ಕಾರ್ಯಕ್ರಮಗಳಿಂದ ಎಲ್ಲರಲ್ಲೂ ದೇಶದ ಬಗ್ಗೆ ಅಭಿಮಾನ ಮೂಡಲಿದೆ.


ಪುಟ 3


## ಕ್ಲೋರಿನ್ ಗ್ಯಾಸ್ ಸೋರಿಕೆ 20ಕ್ಕೂ ಹೆಚ್ಚು ಜನ ಅಸ್ವಸ್ಥ




» ನಮ್ಮಜನ ಸಮಾಚಾರ

ಚಿತ್ರದುರ್ಗ: ಹೊಸದುರ್ಗ ಪಟ್ಟಣದ ಎಪಿಎಂಸಿ ವಾಟರ್ ಟ್ಯಾಂಕ್ ಬಳಿ ಕ್ಲೋರಿನ್ ಗ್ಯಾಸ್ ಸ್ಫೋಟಗೊಂಡು 20 ಕ್ಕೂ ಹೆಚ್ಚು ಜನ ಅಸ್ವಸ್ಥವಾಗಿರುವ ಘಟನೆ ನಡೆದಿದೆ. ಎಪಿಎಂಸಿ ಬಳಿಯ ಇಪ್ಪತ್ತು ಹೆಚ್ಚು ಜನರು ಅಸ್ವಸ್ಥರಾಗಿ ವಾಂತಿಯಿಂದ ಬಳಲುತ್ತಿದ್ದು ಅವರನ್ನು ಹೊಸದುರ್ಗ ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಎಲ್ಲಾರೂ ಉಸಿರಾಟ ತೊಂದರೆಯಿಂದ ಬಳಲುತ್ತಿರುವ ಅಸ್ವಸ್ಥರು ಆಕ್ಸಿಜನ್ ಪೂರೈಸಿ ವೈದ್ಯರು ಚಿಕಿತ್ಸೆ ನೀಡುತ್ತಿದ್ದಾರೆ. ಅಗ್ನಿ ಶಾಮಕ ದಳ, ಪುರಸಭೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ, ಪರಿಶೀಲನೆ ನಡೆಸುತ್ತಿದ್ದು ಹೊಸದುರ್ಗ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ.

### ಪ್ರಮುಖ ಸುದ್ದಿ

# ಒಳಮೀಸಲಾತಿ ಅನುಷ್ಠಾನಕ್ಕೆ ಡಿಎಸ್‌ಎಸ್ ಒತ್ತಾಯ

» ಚಿತ್ರದುರ್ಗ




ಸುಪ್ರೀಂ ಕೋರ್ಟ್ ತೀರ್ಪಿನಂತೆ ಪರಿಶಿಷ್ಟರ ಒಳಮೀಸಲಾತಿ ಅನುಷ್ಠಾನಕ್ಕೆ ಆಗ್ರಹಿಸಿ ಪರಿಶಿಷ್ಟರ ಮೀಸಲಾತಿ ವರ್ಗೀಕರಣ ಜರೂರಾಗಿ ಜಾರಿ ಮಾಡಲು ಒತ್ತಾಯಿಸಿ ಕರ್ನಾಟಕ ದಲಿತ ಸಂಘರ್ಷ ಸಮಿತಿ ಚಿತ್ರದುರ್ಗ ಜಿಲ್ಲಾ ಸಮಿತಿವತಿಯಿಂದ ಪ್ರತಿಭಟನೆಯನ್ನು ನಡೆಸಿ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ರವರಿಗೆ ಸಲ್ಲಿಸಲಾಯಿತು.

ಪರಿಶಿಷ್ಟರ ಮೀಸಲಾತಿ ಪರಿಶಿಷ್ಟ ಜನಾಂಗದ 101 ಜಾತಿಗಳಲ್ಲಿ ಸಮನಾಗಿ ಹಂಚಿಕೆಯಾಗಿಲ್ಲ ಎಂಬ ಆತಂಕ ಹಾಗೂ ಅಸಹನೆಯಿಂದ ಮೂರು ದಶಕಗಳಿಂದ ರಾಜ್ಯಾದ್ಯಂತ ನಿರಂತರವಾಗಿ ಹೋರಾಟಗಳು ನಡೆಯುತ್ತಿವೆ. ಈ ಹೋರಾಟದಲ್ಲಿ ಹಲವಾರು ಹೋರಾಟಗಾರರು ಜೀವ, ಜೀವನ ಹಾಗೂ ಬದುಕನ್ನೇ ಕಳೆದುಕೊಂಡಿದ್ದಾರೆ. ಪರಿಶಿಷ್ಟರ ಒಳಮೀಸಾತಿ ವರ್ಗೀಕರಣ ಮಾಡಲು ಕರ್ನಾಟಕ, ಆಂಧ್ರ ಮತ್ತು ಪಂಜಾಬ್ ಸೇರಿದಂತೆ ಹಲವು ರಾಜ್ಯಗಳಲ್ಲಿ ನಡೆದ ಹೋರಾಟಗಳ ಹಿನ್ನಲೆಯಲ್ಲಿ ಹತ್ತಾರು ರಾಜ್ಯ ಸರ್ಕಾರಗಳು ರಚಿಸಿದ ಹಲವಾರು ಆಯೋಗಗಳು ನೀಡಿದ ವರದಿಗಳನ್ನು ಪರಿಶೀಲಿಸಿದ ಸುಪ್ರೀಂ ಕೋರ್ಟಿನ 7 ನ್ಯಾಯಾಧೀಶರ ಸಂವಿಧಾನ ಪೀಠ ಐತಿಹಾಸಿಕ ತೀರ್ಪು ನೀಡಿ ಈ ವಿವಾದಕ್ಕೆ ತೆರೆ ಎಳೆದಿದೆ ಎಂದಿದ್ದಾರೆ.

ಪರಿಶಿಷ್ಟರ ಮೀಸಲಾತಿ ವರ್ಗೀಕರಣ ರಾಜ್ಯಕ್ಕೆ ಸಂವಿಧಾನದತ್ತ ಅಧಿಕಾರವಿದೆ ಎಂದು ಸುಪ್ರೀಂ ಕೋರ್ಟ್ ತನ್ನ ತೀರ್ಪಿನಲ್ಲಿ ತಿಳಿಸಿದೆ. ಅಲ್ಲದೆ, ಈ ಹಿಂದೆ ಕರ್ನಾಟಕದ ಮುಖ್ಯಮಂತ್ರಿಗಳಾಗಿದ್ದ ಬಸವರಾಜ ಬೊಮ್ಮಯಿರವರ ನೇತೃತ್ವದಲ್ಲಿ "ಸಚಿವ ಸಂಪುಟ ಸಭೆ" ತೀರ್ಮಾನಿಸಿದಂತೆ ಪರಿಶಿಷ್ಟರ ಮೀಸಲಾತಿ ವರ್ಗೀಕರಣ ಮಾಡಲು ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರಾದ ತಮ್ಮ ನೇತೃತ್ವದಲ್ಲಿ ಸಹ "ಸಚಿವ ಸಂಪುಟದ ಸಭೆಯ" ತೀರ್ಮಾನದಂತೆ ಪರಿಶಿಷ್ಟ ಜಾತಿ ಮೀಸಲಾತಿಯ ವರ್ಗೀಕರಣ ಮಾಡಲು ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಿದೆ ದಲಿತ ಸಂಘರ್ಷ ಸಮಿತಿ ಪರಿಶಿಷ್ಟರ ಮೀಸಲಾತಿ ವರ್ಗೀಕರಣಕ್ಕೆ ಒತ್ತಾಯಿಸಿ ರಾಜ್ಯ ಸರ್ಕಾರಕ್ಕೆ ಮನವಿಯನ್ನು ಸಲ್ಲಿಸಲಾಯಿತು.

ಸುಪ್ರೀಂ ಕೋರ್ಟ್ ತೀರ್ಪು ನೀಡಿ 40 ದಿನಗಳು ಕಳೆದಿದೆ. ಸರ್ಕಾರ ಈ ಬಗ್ಗೆ ದೃಢ ನಿಲುವು ತಾಳಿಲ್ಲ. ಆದ್ದರಿಂದ ಕರ್ನಾಟಕ ರವಾನಿಸುತ್ತಿದ್ದೇವೆ. ಕೂಡಲೇ ಮುಖ್ಯಮಂತ್ರಿಗಳು "ಸಚಿವ ಸಂಪುಟದ ಸಭೆ" ನಡೆಸಿ ನಿವೃತ್ತ ನ್ಯಾಯಮೂರ್ತಿ ಎ.ಜೆ. ಸದಾಶಿವರವರ ಆಯೋಗದ ವರದಿಯಂತೆ ಪರಿಶಿಷ್ಟರ ಮೀಸಲಾತಿ ವರ್ಗೀಕರಣ ಮಾಡಲು ಮನವಿ ಮಾಡಿ ಸುಪ್ರೀಂ ಕೋರ್ಟ್‌ನ 7 ನ್ಯಾಯಾಧೀಶರ ತೀರ್ಪಿನಂತೆ ಪರಿಶಿಷ್ಟರ ಮೀಸಲಾತಿಯಲ್ಲಿ ಒಳಮೀಸಲಾತಿ ಅನುಷ್ಠಾನ ಮಾಡಬೇಕು. 2023–24 ಮತ್ತು 2024–2025ನೇ ಸಾಲಿನಲ್ಲಿ 25,391 ಸಾವಿರ ಕೋಟಿ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದ ಖಅಖಕ/ಖಿಖಕ ಅಭಿವೃದ್ಧಿ ಹಣವನ್ನು ಸಾಮಾನ್ಯ ಯೋಜನೆಗೆ ಬಳಸಲಾಗಿದೆ. ರಾಜ್ಯ ಸರ್ಕಾರ ಈ ಹಣವನ್ನು ಈ ಸಮಾಜದ ಅಭಿವೃದ್ಧಿಗೆ ವಾಪಾಸ್ ನೀಡಬೇಕು, ಪರಿಶಿಷ್ಟಜಾತಿ/ಪರಿಶಿಷ್ಟ ವರ್ಗದ ವಿದ್ಯಾರ್ಥಿ ವೇತನವನ್ನು ಸಕಾಲಕ್ಕೆ ನೀಡುತ್ತಿಲ್ಲ ಹಾಗೂ ಮೆರಿಟ್ ವಿದ್ಯಾರ್ಥಿ ವೇತನ ಮತ್ತು ವಿದೇಶ ವ್ಯಾಸಾಂಗದ ಪ್ರಬುದ್ಧ ಯೋಜನೆ ರದ್ದಾಗಿರುವ ದಟ್ಟವದಂತಿ ಹಬ್ಬಿದೆ. ಇದನ್ನು ಪುನರಾಂಭಿಸಬೇಕು, ಆ ಪರಿಶಿಷ್ಟ ಮೀಸಲಾತಿ ವರ್ಗೀಕರಣವಾಗುವವರೆಗೂ ಸರ್ಕಾರ ಎಲ್ಲಾ ಉದ್ಯೋಗ ನೇಮಕಾತಿಗಳನ್ನು ಸ್ಥಗಿತಗೊಳಿಸಲಿ. ಖಾಸಗಿ ಉದ್ಯೋಗ ಕ್ಷೇತ್ರ ಮತ್ತು ಗುತ್ತಿಗೆ ನೇಮಕಾತಿಗಳಲ್ಲಿಯೂ ಎಸ್.ಸಿ./ಎಸ್.ಟಿ ಮೀಸಲಾತಿ ನೀಡಬೇಕು, ಕೇಂದ್ರ ಸರ್ಕಾರ ಕೂಡಲೇ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗದ ಅಭಿವೃದ್ಧಿಗಾಗಿ ಖಅಖಕ/ಖಿಖಕ ಕಾಯ್ದೆ ರಚಿಸಲಿ ಮತ್ತು ಜನಸಂಖ್ಯೆಗನುಗುಣವಾಗಿ ಬಜೆಟ್‌ನಲ್ಲಿ ಹಣ ನೀಡಬೇಕು ಎಂದು ಆಗ್ರಹಿಸಲಾಯಿತು. ಈ ಸಂದರ್ಭದಲ್ಲಿ ದ.ಸಂ.ಸ.ಯ ಜಿಲ್ಲಾಧ್ಯಕ್ಷ ಎಸ್.ಎನ್.ವಿಶ್ವನಾರಾಯಣಮೂರ್ತಿ, ರಾಜ್ಯಾಧ್ಯಕ್ಷ ಕುಂಚಿಗನಾಳ್ ಮಹಾಲಿಂಗಪ್ಪ, ವಿಭಾಗೀಯ ಕಾರ್ಯಾಧ್ಯಕ್ಷರಾದ ನೇಹಮಲ್ಲೇಶ್, ಜೈ ಭಾರತ್ ರಕ್ಷಣಾ ವೇದಿಕೆ ಸಂಸ್ಥಾಪಕ ಜಿಲ್ಲಾಧ್ಯಕ್ಷ ಕೆ.ನಾಗಭೂಷಣ್, ಯುವ ಘಟಕದ ಜಿಲ್ಲಾಧ್ಯಕ್ಷ ಪ್ರದೀಪ್, ಕಾನೂನು ಸಲಹೆಗಾರರಾದ ಪ್ರಭಾಕರ್, ತಾಲ್ಲೂಕು ಉಪಾಧ್ಯಕ್ಷ ಚನ್ನಬಸವ, ತಾಲ್ಲೂಕು ಅಧ್ಯಕ್ಷ ಕಣುಮೇಶ್ ಕಲ್ಲಾಹಟ್ಟಿ, ಶ್ರೀಹರಿ ಇಮ್ರಾನಗ ಬೇಗ್ ಸೇರಿದಂತೆ ಇತರರು ಭಾಗವಹಿಸಿದ್ದರು.





## ಫಾಸ್ಟ್ ನ್ಯೂಸ್

### ಪ್ರಜಾಪ್ರಭುತ್ವ ದಿನಾಚರಣೆ, ಜಿಲ್ಲೆಯಲ್ಲಿ 80 ಕಿ.ಮೀ ಉದ್ದದ ಮಾನವ ಸರಪಳಿ; ಡಿಸಿ ಗಂಗಾಧರಸ್ವಾಮಿ

» ದಾವಣಗೆರೆ

ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಮಾನವ ಸರಪಳಿನ್ನು ಸೆ.15 ರಂದು ಬೆಳಿಗ್ಗೆ 8.30 ರಿಂದ 9.30ವರೆಗೆ ನ್ಯಾಮತಿ ತಾಲ್ಲೂಕಿನಿಂದ ಹರಿಹರ ಪಟ್ಟದ ಮುಖಾಂತರ ರಾಣೆಬೆನ್ನೂರು ತಾಲ್ಲೂಕಿನ ಗಡಿಯವರೆಗೆ ರಚಿಸಲಾಗುವುದು. ಮತ್ತು ಜಿಲ್ಲೆಯ 25 ಗ್ರಾಮ, 2 ಯುಎಲ್‌ಬಿಗಳ ಮೂಲಕ 80 ಕಿ.ಮೀ ಉದ್ದದ ಮಾನವ ಸರಪಳಿನ್ನು ಸುಮಾರು 70 ಸಾವಿರ ಜನರಿಂದ ರಚನೆ ಮಾಡಲಾಗುತ್ತದೆ ಎಂದು ಜಿಲ್ಲಾಧಿಕಾರಿಗಂಗಾಧರಸ್ವಾಮಿಜಿ.ಎಂತಿಳಿಸಿದ್ದಾರೆ. ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನದಂದು ದೇಶದ ನಾಗರಿಕರಿಗೆ, ವಿಶೇಷವಾಗಿ ಕರ್ನಾಟಕದ ನಾಗರಿಕರಿಗೆ ಜಾಗೃತಿ ಜಾಥಾ ನಕ್ಷೆಯಲ್ಲಿ ಬೃಹತ್ ಮಾನವ ಸರಪಳಿಯನ್ನು ಆಯೋಜಿಸುವ ಮೂಲಕ ಸಾರ್ವಜನಿಕರಿಗೆ ಪ್ರಜಾಪ್ರಭುತ್ವದ ಮೂಲತತ್ವ ಮತ್ತು ಆಶಯಗಳ ಬಗ್ಗೆ ಅರಿವು ಮೂಡಿಸಲಾಗುವುದು ಎಂದು ತಿಳಿಸಿದ್ದಾರೆ. ಕಾರ್ಯಕ್ರಮದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಭಾಗವಹಿಸಲು ಇಚ್ಚಿಸುವ ಸಾರ್ವಜನಿಕರು, ಸಂಘ, ಸಂಸ್ಥೆಗಳು, ಸಂಘಟನೆಗಳು, ಸರ್ಕಾರೇತರ ಸಂಸ್ಥೆಗಳು https://www.democracydaykarnataka.in/registration ವೆಬ್‌ಸೈಟ್ ಮೂಲಕ ನೊಂದಣಿ ಮಾಡಿಕೊಳ್ಳಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

### ಪ್ರೋತ್ಸಾಹಧನಕ್ಕಾಗಿ ವಿದ್ಯಾರ್ಥಿಗಳಿಂದ ಅರ್ಜಿ

» ದಾವಣಗೆರೆ

ಪ್ರಸಕ್ತ ಸಾಲಿನಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಪ್ರಥಮಬಾರಿಗೆಪ್ರಥಮದರ್ಜೆಯಲ್ಲಿಉತ್ತೀರ್ಣರಾದ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ನೀಡಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.ಸಮಾಜ ಕಲ್ಯಾಣ ಇಲಾಖಾ ವೆಬ್ ಸೈಟ್ www.sw.kar.nic.in ಅಥವಾ https://swdservices.karnataka.gov.inನಲ್ಲಿ ನೋಂದಣಿ ಮಾಡಿ ಅರ್ಜಿ ಸಲ್ಲಿಸಬಹುದೆಂದು ಹೊನ್ನಾಳಿ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

### ಅಭಿವೃದ್ಧಿ ಪತ್ರಿಕೋದ್ಯಮ, ಪರಿಸರ ಪತ್ರಿಕೋದ್ಯಮ ಪ್ರಶಸ್ತಿಗೆ ನಾಮನಿರ್ದೇಶನಗಳ ಆಹ್ವಾನ

» ಚಿತ್ರದುರ್ಗ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು 2017ನೇ ಸಾಲಿನಿಂದ 2023ನೇ ಸಾಲಿನವರೆಗೆ ಅಭಿವೃದ್ಧಿ ಪತ್ರಿಕೋದ್ಯಮ ಮತ್ತು ಪರಿಸರ ಪತ್ರಿಕೋದ್ಯಮ ಪ್ರಶಸ್ತಿಗಳಿಗೆ ಅರ್ಹ ಪತ್ರಕರ್ತರು / ಸಂಘ ಸಂಸ್ಥೆಗಳು ಹಾಗೂ ಸಾರ್ವಜನಿಕರಿಂದ ನಾಮನಿರ್ದೇಶನಗಳನ್ನು ಆಹ್ವಾನಿಸಿದೆ.ಅಭಿವೃದ್ಧಿ ಪತ್ರಿಕೋದ್ಯಮ ಕ್ಷೇತ್ರದಲ್ಲಿ ಹಾಗೂ ಪರಿಸರ ಪತ್ರಿಕೋದ್ಯಮ ಕ್ಷೇತ್ರದಲ್ಲಿ ಅಪೂರ್ವ ಸಾಧನೆ ಮಾಡಿರುವ ಪತ್ರಕರ್ತರನ್ನು ಪ್ರೋತ್ಸಾಹಿಸುವ ಸಲುವಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮೂಲಕ ಅಭಿವೃದ್ಧಿ ಪತ್ರಿಕೋದ್ಯಮ ಮತ್ತು ಪರಿಸರ ಪತ್ರಿಕೋದ್ಯಮ ಪ್ರಶಸ್ತಿಗಳನ್ನು ನೀಡಲು 2001ರಲ್ಲಿ ರಾಜ್ಯ ಸರ್ಕಾರವು ಆದೇಶ ಹೊರಡಿಸಿತು. ಅದರಂತೆ 2001ರಿಂದ 2016ರ ವರೆಗೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಅರ್ಹ ಪತ್ರಕರ್ತರನ್ನು ಗುರುತಿಸಿ ಪ್ರಶಸ್ತಿಗಳನ್ನು ನೀಡುತ್ತಾ ಬಂದಿದೆ.2017ನೇ ಸಾಲಿನಿಂದ 2023ನೇ ಸಾಲಿನವರೆಗೆ ಅರ್ಹ ಪತ್ರಕರ್ತರಿಗೆ ಈ ಪ್ರಶಸ್ತಿಗಳನ್ನು ನೀಡುವ ಸಲುವಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿದೆ.ಪರಿಸರ ಹಾಗೂ ಅಭಿವೃದ್ಧಿ ಪತ್ರಿಕೋದ್ಯಮ ಕ್ಷೇತ್ರಕ್ಕೆ ಅನುಪಮ ಕೊಡುಗೆ ನೀಡಿರುವ ಹಾಗೂ ಪತ್ರಿಕೋದ್ಯಮದಲ್ಲಿ ಕನಿಷ್ಠ 10 ವರ್ಷಗಳ ಅನುಭವ ಹೊಂದಿರುವ ಅರ್ಹ ಪತ್ರಕರ್ತರನ್ನು ಸಾರ್ವಜನಿಕರು, ಸಂಘ ಸಂಸ್ಥೆಗಳು ನಾಮನಿರ್ದೇಶನ ಮಾಡಬಹುದು ಅಥವಾ ವೈಯುಕ್ತಿಕವಾಗಿ ಸ್ವಯಂ ಅರ್ಜಿ ಸಲ್ಲಿಸಬಹುದು.2017 ರಿಂದ 2023 ರ ಅವಧಿಯ ಎರಡೂ ವಿಭಾಗಗಳ ಪ್ರಶಸ್ತಿಗಳಿಗೆ ತಲಾ 7 ಅರ್ಹ ಪತ್ರಕರ್ತರನ್ನು ಆಯ್ಕೆ ಮಾಡಲಾಗುವುದು. ಈ ಪ್ರಶಸ್ತಿಯ ಮೊತ್ತ ಒಂದು ಲಕ್ಷ ರೂ. ನಗದು ಪುರಸ್ಕಾರ ಪ್ರಶಸ್ತಿ ಪತ್ರ ಹಾಗೂ ಸ್ಮರಣಿಕೆಯನ್ನು ಹೊಂದಿರುತ್ತದೆ. ಅರ್ಜಿಗಳು / ನಾಮನಿರ್ದೇಶನಗಳನ್ನು ಮಾನ್ಯ ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ನಂ. 17, ವಾರ್ತಾಸೌಧ, ಭಗವಾನ್ ಮಹಾವೀರ ರಸ್ತೆ, (ಇನ್‌ಫೆಂಟ್ರಿ ರಸ್ತೆ), ಬೆಂಗಳೂರು 560001 ಇಲ್ಲಿಗೆ ಅಥವಾ ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಅಧಿಕಾರಿಗಳಿಗೆ ಖುದ್ದಾಗಿ ಅಥವಾ ಅಂಚೆ ಮೂಲಕ ಅಥವಾ ಇ-ಮೇಲ್ ವಿಳಾಸ ಣಡಿಚಿತಿಚಿಡಿಜ@ ರಟಚುಟ.ಛಿಂಟ ಗೆ ದಿನಾಂಕ:30-09-2024ರ ಸಂಜೆ 5.00 ಗಂಟೆಯ ಒಳಗಾಗಿ ಸಲ್ಲಿಸಬಹುದು ಎಂದು ಇಲಾಖೆಯ ಆಯುಕ್ತರಾದ ಹೇಮಂತ್ ಎಂ. ನಿಂಬಾಳ್ಕರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಯದೇವ ಶ್ರೀ ಜಯಂತ್ಯೋತ್ಸವ; ಕ್ರೀಡಾ ಜಾತ್ರೆ

» ಚಿತ್ರದುರ್ಗ



ಶರಣ ಸಂಸ್ಕೃತಿ ಉತ್ಸವ ಹಾಗೂ ಜಯದೇವ ಶ್ರೀಗಳ 150ನೇ ಜಯಂತ್ಯೋತ್ಸವದ ಅಂಗವಾಗಿ ನಗರದಲ್ಲಿ ಕ್ರೀಡಾ ಪ್ರತಿಭೆಗಳಿಗೆ ಪ್ರೋತ್ಸಾಹ ನೀಡುವ ದೃಷ್ಟಿಯಿಂದ ಕ್ರೀಡಾ ಜಾತ್ರೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಮಾದಾರ ಚನ್ನಯ್ಯ ಗುರುಪೀಠದ ಶ್ರೀ ಬಸವಮೂರ್ತಿ ಮಾದಾರ ಚನ್ನಯ್ಯ ಶ್ರೀಗಳು ತಿಳಿಸಿದರು.

ಚಿತ್ರದುರ್ಗ ನಗರದ ಬೃಹನ್ಮಠದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದಅವರು,ಅ.1ರಿಂದ4ರವರೆಗೆ ನಗರದ ಜೆ.ಎಂ.ಐ.ಟಿ. ಮೈದಾನದಲ್ಲಿ ಕ್ರಿಕೆಟ್ ಪಂದ್ಯಾವಳಿಯು ನಾಕೌಟ್ ಮಾದರಿಯಲ್ಲಿ ಹಮ್ಮಿಕೊಳ್ಳಲಾಗಿದೆ. ಇದರಲ್ಲಿ 10 ಇಲಾಖೆಯ ತಂಡಗಳು ಭಾಗವಹಿಸಲಿವೆ. ಇದರಲ್ಲಿ ವಿಜೇತರಾದವರಿಗೆ ನಗದು ಬಹುಮಾನದೊಂದಿಗೆ ಟ್ರೋಫಿಯನ್ನು ನೀಡಲಾಗುವುದು ಕ್ರೀಡಾ ಕೂಟ ಪ್ರಾರಂಭದಲ್ಲಿ ಮತ್ತು ಮುಕ್ತಾಯದಲ್ಲಿ ವರ್ಣರಂಜಿತ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಎಸ್‌ಜೆಎಂ ಪೀಠದ ಆಡಳಿತ ಮಂಡಳಿ ಸದಸ್ಯರಾದ ಚಿತ್ರದುರ್ಗ ಬೃಹನ್ಮಠದ ಶ್ರೀ ಬಸವ ಪ್ರಭು ಸ್ವಾಮೀಜಿ ಮಾತನಾಡಿ, ಶರಣ ಸಂಸ್ಕೃತಿ ಉತ್ಸವ ಹಾಗೂ ಜಯದೇವ ಶ್ರೀಗಳು 150ನೇ ಜಯಂತ್ಯೋತ್ಸವದ ಅಂಗವಾಗಿ ಶ್ರೀಮಠದಲ್ಲಿ ಸೆ. 25 ರಿಂದ ಅ.4ರವರಗೆ ಬೆಳಿಗ್ಗೆ ಅರೋಗ್ಯ ಯೋಗ ಮೇಳವನ್ನು ಹಮ್ಮಿಕೊಳ್ಳಲಾಗಿದೆ ಸಾರ್ವಜನಿಕರಿಗೆ ತಮ್ಮ ಆರೋಗ್ಯದ ಬಗ್ಗೆ ಜಾಗೃತಿಯನ್ನು ಮೂಡಿಸಲಾಗುತ್ತದೆ. ಸಂಜೆ ಜಯದೇವ ಶ್ರೀಗಳ ಬಗ್ಗೆ ಉಪನ್ಯಾಸವನ್ನು ಏರ್ಪಡಿಸಲಾಗಿದೆ ಎಂದರು.

ಕ್ರೀಡಾ ಸಮಿತಿಯ ಅಧ್ಯಕ್ಷ ಶ್ರೀರಾಮ್ ಮಾತನಾಡಿ, ಶರಣ ಸಂಸ್ಕೃತಿ ಉತ್ಸವ ಹಾಗೂ ಜಯದೇವ ಶ್ರೀಗಳು 150ನೇ ಜಯಂತ್ಯೋತ್ಸವದ ಅಂಗವಾಗಿ ಕ್ರೀಡಾ ಕೂಟವನ್ನು ಹಮ್ಮಿಕೊಳ್ಳಲಾಗಿದೆ. ಇದರಲ್ಲಿ ಕಬ್ಬಡಿ ಹ್ಯಾಂಡ್ ಬಾಲ್, ಖೋ ಖೋ ಪಂದ್ಯಾವಳಿಯನ್ನು ಅ. 5 ರಿಂದ 7ರವರೆಗೆ ನಗರದ ಹಳೇ ಮಾಧ್ಯಮಿಕ ಶಾಲಾ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ ಇದರಲ್ಲಿ ಚಿತ್ರದುರ್ಗ ಜಿಲ್ಲೆಯ ಸರ್ಕಾರಿ ಮತ್ತು ಖಾಸಗಿ ಶಾಲೆಯ 17 ವರ್ಷದೊಳಗಿನ ಮಕ್ಕಳು ಬಾಗವಹಿಸಬಹುದಾಗಿದೆ. ಇದರಲ್ಲಿ ಜಿಲ್ಲೆಯ 6 ತಾಲ್ಲೂಕುಗಳಿಂದಮ ಸುಮಾರು 1400ಕ್ಕೂ ಹೆಚ್ಚು ಮಕ್ಕಳು ಭಾಗವಹಿಸಲಿದ್ದಾರೆ ಇವರಿಗೆ ಉಚಿತವಾಗಿ ಟಿ ಶರ್ಟ, ವಸತಿ ಆಹಾರವನ್ನು ಹಾಗೂ ಪ್ರಯಾಣದ ಭತ್ಯೆಯನ್ನು ಸಹಾ ನೀಡಲಾಗುವುದು ಎಂದರು.

ಮಹಿಳಾ ಕ್ರೀಡಾಕೂಟ ಸಮಿತಿಯ ಅಧ್ಯಕ್ಷರಾದ ಶ್ರೀಮತಿ ರುದ್ರಾಣಿ ಮಾತನಾಡಿ ಶರಣ ಸಂಸ್ಕೃತಿ ಉತ್ಸವ ಹಾಗೂ ಜಯದೇವ ಶ್ರೀಗಳು 150ನೇ ಜಯಂತ್ಯೋತ್ಸವದ ಅಂಗವಾಗಿ ನಗರದ ಮಹಿಳೆಯರಿಗಾಗಿ ಕ್ರೀಡಾ ಕೂಟವನ್ನು ಏರ್ಪಡಿಸಲಾಗಿದೆ ಇದರಲ್ಲಿ ಹಗ್ಗ ಜಗ್ಗಾಟ, ಮಡಿಕೆ ಒಡೆಯವುದು ಚಮಚದಲ್ಲಿ ನಿಂಬೆಹಣ್ಣು, ಥ್ರೋಬಾಲ್, ಮೋಜಿಕಲ್ ಚೇರ್ ಸೇರಿದಂತೆ ವಿವಿದ ಆಟಗಳನ್ನು ಹಳೇ ಮಾಧ್ಯಮಿಕ ಶಾಲಾ ಆವರಣದಲ್ಲಿ ಆಡಿಸಲಾಗುವುದು, ಇದರಲ್ಲಿ 25 ರಿಂದ 50 ವರ್ಷದವರಿಗೆ ಒಂದು ಗುಂಪು 50 ವರ್ಷ ಮೇಲ್ಪಟ್ಟವರಿಗೆ ಒಂದು ಗುಂಪು ಮಾಡಿ ಆಟವನ್ನು ಆಡಿಸಲಾಗುವುದು ಇದರಲ್ಲಿ ವಿಜೇತರಾದವರಿಗೆ ಬಹು ಮಾನ ನೀಡಲಾಗುವುದು ಅಲ್ಲದೆ ಸಮಾರೋಪದಿನದಂದು ಶರಣದ ವೇಷ ಭೂಷಣ ಸ್ಪರ್ದೆಯನ್ನು ಏರ್ಪಡಿಸಲಾಗಿದೆ ಮಹಿಳೆಯರು ಬರುವಾಗ ಆಧಾರ ಕಾರ್ಡ ತರಬೇಕೆಂದು ತಿಳಿಸಿದರು.

ಜಯದೇವ ಕಪ್ ಕ್ರೀಡಾಕೂಟದ ಗೌರವ ಅಧ್ಯಕ್ಷ ನಾಗರಾಜ್, ಉಪಾಧ್ಯಕ್ಷ ಶಂಕರ್ ಮೂರ್ತಿ, ಮಂಜುನಾಥ್ ಗೊಪ್ಪೆ, ಕ್ರೀಡಾಕೂಟದ ಉಸ್ತುವಾರಿಗಳಾದ ರವಿಶಂಕರ್‌ರೆಡ್ಡಿ, ಪ್ರಧಾನ ಕಾರ್ಯದರ್ಶಿ ಸೈಯದ್ ಅನೀಸ್, ಕಾರ್ಯದರ್ಶಿ ವಿಜಯಕುಮಾರ್, ಶಾಂತಕುಮಾರ್, ಸಂಘಟನಾ ಕಾರ್ಯದರ್ಶಿ ರವಿ ಮಲ್ಲಾಪುರ, ಸೈಯದ್ಖುದ್ದುಸ್, ಪ್ರಕಾಶ್ರಾಮನಾಯ್ಕ್, ಶಿವರಾಂ, ಜಯ್ಯಣ್ಣ ಮುರುಗೇಶ್, ರುದ್ರಮೂರ್ತಿ, ತಿಪ್ಪಣ್ಣ ಪ್ರಸನ್ನ ಕುಮಾರ್ ಸೇರಿದಂತೆ ಇತರರು ಭಾಗವಹಿಸಿದ್ದರು.

### ಸ್ವಚ್ಛತೆಗೆ ದಾವಣಗೆರೆ ಸಿವಿಲ್ ಫೋರಂ ಆಗ್ರಹ

# ಸ್ವಚ್ಛತೆ ಇಲ್ಲದೇ ಗಬ್ಬೆದ್ದು ನಾರುವ ತಹಶಿಲ್ದಾರ ಕಚೇರಿ

» ದಾವಣಗೆರೆ



ನಗರದ ಹಳೇ ಪಿ.ಬಿ.ರಸ್ತೆಯಲ್ಲಿನ ತಹಶೀಲ್ದಾರ್ ಕಚೇರಿ ಅನೈರ್ಮಲ್ಯದಿಂದ ರೋಗಗ್ರಸ್ತ ಕಟ್ಟಡವಾಗಿದ್ದು, ನಿರ್ವಹಣೆ ಹಾಗೂ ಸ್ವಚ್ಛತೆ ಕೊರತೆಯಿಂದ ದುರ್ಬಲಗೊಳ್ಳುತ್ತಿರುವ ಕಟ್ಟಡ ಸರಂಕ್ಷಿಸಿ ಸ್ವಚ್ಚತಾ ಕಾರ್ಯ ಮಾಡಿಸುವಂತೆಆಗ್ರಹಿಸಿದಾವಣಗೆರೆ ಸಿವಿಲ್ ಫೋರಂ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿತು.

ಜಿಲ್ಲಾಡಳಿತ ಭವನದಲ್ಲಿ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರ ಸ್ವಾಮಿ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದ ಫೋರಂ ಪದಾಧಿಕಾರಿಗಳು, ಸರ್ಕಾರಿ ಕಚೇರಿಗಳು ಸಾರ್ವಜನಿಕರಿಗೆ ಮಾದರಿ ಆಗುವ ರೀತಿ ಆಗಬೇಕು. ಸಾರ್ವಜನಿಕ ಆಸ್ತಿ ಕಾಪಾಡುವುದು ಸರ್ಕಾರಿ ನೌಕರರ ಆದ್ಯ ಕರ್ತವ್ಯ ಆಗಿದೆ. ಆದರೆ, ಇದು ಜಿಲ್ಲೆಯಲ್ಲಿನ ಸರ್ಕಾರಿ ಕಟ್ಟಡಗಳು ಯಾವ ಮಟ್ಟಿಗೆ ಇರಬಹುದು ಎಂಬುದಕ್ಕೆ ತಾಜಾ ಉದಾಹರಣೆ ಎಂಬಂತೆ ಸದ್ಯ ಇರುವ ತಹಶೀಲ್ದಾರ್ ಕಚೇರಿ ಸ್ಥಿತಿ ಇದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಪಹಣಿ ದೋಷ, ತಿದ್ದುಪಡಿ, ಖಾತೆ, ಪೌತಿ ಖಾತೆಯಂತಹ ಹಲವು ಸಮಸ್ಯೆ ಹೊತ್ತು ಇಲ್ಲಿಗೆ ಸಾವಿರಾರು ರೈತರು ನಿತ್ಯ ಆಗಮಿಸುತ್ತಾರೆ. ಕನಿಷ್ಠ ಕುಡಿಯುವ ನೀರು, ಶೌಚಾಲಯ ಸೌಲಭ್ಯ ಇಲ್ಲದೆ ಇಲ್ಲಿಗೆ ಬರುವ ರೈತರು, ರೈತ ಮಹಿಳೆಯರು ನಿತ್ಯ ಅನುಭವಿಸುವ ಸಂಕಟ ಹೇಳತೀರದಾಗಿದೆ ಎಂದು ಕಿಡಿಕಾರಿದರು.

ರೈತರ ಜೀವನಾಡಿಯಾಗಿರುವ ತಹಶೀಲ್ದಾರ್ ಕಚೇರಿ ಅನೈರ್ಮಲ್ಯಕ್ಕೀಡಾಗಿ ಅಧೋಗತಿ ತಲುಪಿದೆ. ಸ್ವಚ್ಛತೆ ಇಲ್ಲದೆ ಕಟ್ಟಡವೇ ದೂಳು, ಜೇಡರ ಬಲೆಯಿಂದ ಬಂಧಿತವಾಗಿದೆ. ಎಲ್ಲೆಂದರಲ್ಲಿ ಬಿದ್ದಿರುವ ಕಸಕಡ್ಡಿ ಕಣ್ಣಿಗೆ ರಾಚುತ್ತದೆ. ಕಟ್ಟಡದ ತಾರಸಿ ಮೇಲೆ ಆಲ, ಅರಳಿ, ಸುಬಾಬಲು ಗಿಡ ಸೇರಿದಂತೆ ಹಲವು ಗಿಡಗಂಟೆ ಬೆಳೆದಿವೆ. ಇದರಿಂದಲೇ ಇಡೀ ಕಟ್ಟಡ ಶಿಥಿವಾಲವಸ್ಥೆ ತಲುಪಿದೆ. ಇದರಿಂದ ನೀರು ಬಸಿದು, ದೂಳು ಮೆತ್ತಿಕೊಂಡು ರೈತರಿಗೆ ಸಂಬಂಧಿಸಿದ ಅತ್ಯಮೂಲ್ಯ ಹಾಗೂ ಅಪರೂಪದ ದಾಖಲೆಗಳು ಹಾಳಾಗುವ ಆತಂಕ ಎದುರಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಕಾರಣ ಸಂಬಂಧಿಸಿದ ಅಧಿಕಾರಿಗಳು ಆದಷ್ಟು ಬೇಗ ರೈಲ್ವೆ ನಿಲ್ದಾಣ ಬಳಿ ಇರುವ ಹೊಸ ಕಟ್ಟಡಕ್ಕೆ ತಹಶೀಲ್ದಾರ್ ಕಚೇರಿ ಹಾಗೂ ಭೂ ಮಾಪನ ಇಲಾಖೆ ಸ್ಥಳಾಂತರಿಸಬೇಕು. ಹೊಸ ಕಟ್ಟಡದ ಪಕ್ಕದ ಜೈಲನ್ನು ನಗರ ಹೊರ ವಲಯಕ್ಕೆ ಸ್ಥಳಾಂತರಿಸಿ ಅಲ್ಲಿ ಉಪ ನೋಂದಣಿ ಕಚೇರಿ ಸ್ಥಳಾಂತರಿಸಬೇಕು. ತಹಶೀಲ್ದಾರ್ ಕಚೇರಿ, ಭೂ ಮಾಪನ ಇಲಾಖೆ ಹಾಗೂ ಉಪ ನೋಂದಣಿ ಕಚೇರಿ ಒಟ್ಟಿಗೆ ಇದ್ದರೆ ರೈತರಿಗೆ ಸಹಾಯಕವಾಗುತ್ತದೆ ಎಂದರು.

ಜಿಲ್ಲೆಯ ಎಲ್ಲಾ ಸರ್ಕಾರಿ ಕಚೇರಿ ಕಟ್ಟಡಗಳ ಸ್ಥಿತಿ ಇದೇ ರೀತಿಯದ್ದಾಗಿದೆ. ಕನಿಷ್ಠ ಕಟ್ಟಡಗಳ ರಕ್ಷಣೆಗೆ ಸಂಬಂಧಪಟ್ಟ ಇಲಾಖೆಯ ಹಿರಿಯ ಅಧಿಕಾರಿಗಳು ಗಮನ ಹರಿಸುವಂತೆ ತಾವು ಆದೇಶ ನೀಡಬೇಕು. ಒಂದು ವೇಳೆ ಸೆ.18ರ ಒಳಗೆ ಸ್ವಚ್ಛತೆ ಕೈಗೊಳ್ಳದೇ ಇದ್ದರೆ ದಾವಣಗೆರೆ ಸಿವಿಕ್ ಫೋರಂನಿಂದಲೇ ಸ್ವಚ್ಛತಾ ಕಾರ್ಯ ಕೈಗೊಳ್ಳುತ್ತೇವೆ. ತಾವು ಇದೇ ಮನವಿ ಪತ್ರವನ್ನು ಸ್ವಚ್ಛತಾ ಕಾರ್ಯ ಕೈಗೊಳ್ಳಲು ಅನುಮತಿ ಕೋರಿದ ಪತ್ರ ಎಂದು ಪರಿಗಣಿಸಿ, ಸ್ವಚ್ಛತಾ ಕಾರ್ಯ ಕೈಗೊಳ್ಳಲು ಅವಕಾಶ ಮಾಡಿಕೊಡಬೇಕೆಂದು ಕೋರಿದರು.ಈ ವೇಳೆ ಫೋರಂನ ಗೌರವಾಧ್ಯಕ್ಷರು, ದಾವಣಗೆರೆ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಎಲ್.ಹೆಚ್.ಅರುಣ್ ಕುಮಾರ್, ಅಧ್ಯಕ್ಷ ಮಲ್ಲಿಕಾರ್ಜುನ ಕಬ್ಬೂರು, ಪ್ರಧಾನ ಕಾರ್ಯದರ್ಶಿ ಎಂ.ವೈ.ಸತೀಶ್, ಸಂಘಟನಾ ಕಾರ್ಯದರ್ಶಿ ಪಾಟೀಲ್ ವೀರನಗೌಡ, ಪಿ.ಎಸ್.ಲೋಕೇಶ್, ಎನ್. ನಿಂಗರಾಜ್, ಕೆ.ಬಿ.ಅನಿಲ್ ಕುಮಾರ್,ವಿಶ್ವನಾಥ್ ಮಂಡಲೂರು ಇತರರು ಇದ್ದರು.

### ತಹಶೀಲ್ದಾರ್ ಕಚೇರಿಯಿದಲೇ ಸ್ವಚ್ಛತೆ ಆರಂಭ

ಫೋರಂ ಮನವಿಗೆ ಮೆಚ್ಚುಗೆ ವ್ಯಕ್ತಪಡಿಸಿ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ, ಸರ್ಕಾರಿ ಕಚೇರಿ ಕಟ್ಟಡಗಳ ಸ್ವಚ್ಛತೆ ಅಭಿಯಾನವನ್ನು ಮೊದಲು ದಾವಣಗೆರೆ ತಹಶಿಲ್ದಾರ್ ಕಚೇರಿ ಕಟ್ಟಡದಿಂದಲೇ ಆರಂಭಿಸಲಾಗುವುದು. ಜಿಲ್ಲೆಯಲ್ಲಿ ಸರ್ಕಾರಿ ಕಚೇರಿ ಕಟ್ಟಡಗಳ ಸ್ವಚ್ಛತಾ ಅಭಿಯಾನವನ್ನು ನಾವು ನೀವು ಒಟ್ಟಾಗಿ ಮಾಡೋಣ. ನಾನು ಕೂಡ ಪೊರಕೆ ಹಿಡಿದು ಸ್ವಚ್ಚತೆಗೆ ನಿಲ್ಲುತ್ತೇನೆ. ಹಲವು ಸರ್ಕಾರಿ ಕಚೇರಿ ದೂಳು ಹಿಡಿದಿವೆ. ದಾವಣಗೆರೆ ಸಿವಿಲ್ ಫೋರಂ ಈಗ ಧ್ವನಿ ಎತ್ತಿರುವುದನ್ನು ಸ್ವಾಗತಿಸುತ್ತೇನೆ. ಶೀಘ್ರ ಸ್ವಚ್ಛತಾ ಅಭಿಯಾನ ಆರಂಭಿಸಲಾಗುವುದು ಎಂದುರು.

# ವಿವಿ ಸಾಗರ ನೀರಿಗಾಗಿ ಪಾದಯಾತ್ರೆಗೆ ನಿರ್ಧಾರ

» ನಮ್ಮಜನ ಸಮಾಚಾರ

ಚಿತ್ರದುರ್ಗ: ತಾಲೂಕಿನ ವಿವಿ ಪುರ ಗ್ರಾಮ ಪಂಚಾಯಿತ್ತಿ ವ್ಯಾಪ್ತಿಯ ಹಳ್ಳಿಗಳ ಕೆರೆಗಳಿಗೆ ನೀರು ಹರಿಸಲು ಆಗ್ರಹಿಸಿ ವಿವಿ ಪುರದಿಂದ ತಾಲೂಕು ಕಚೇರಿವರೆಗೆ ಪಾದಯಾತ್ರೆ ನಡೆಸಲು ರೈತ ಸಂಘದಿಂದ ಬೀರೇನಹಳ್ಳಿಯಲ್ಲಿ ಸಭೆ ನಡೆಸಿ ತೀರ್ಮಾನ ಕೈಗೊಳ್ಳಲಾಯಿತು.



ಸಭೆಯನ್ನು ಉದ್ದೇಶಿಸಿ ರೈತಸಂಘದ ತಾಲೂಕು ಅಧ್ಯಕ್ಷ ಕೆ.ಟಿ. ತಿಪ್ಪೇಸ್ವಾಮಿ ಮಾತನಾಡಿ, ತಾಲೂಕಿನ ಭರಮಗಿರಿ, ಗೌನಹಳ್ಳಿ, ಗುಡಿಹಳ್ಳಿ, ಬೀರೇನಹಳ್ಳಿ, ಕೂನಿಕೆರೆ ಹಾಗೂ ತವಂದಿ ಗ್ರಾಮದ ಕೆರೆಗಳಿಗೆ ವಾಣಿ ವಿಲಾಸಜಲಾಶಯದಿಂದ ನೀರು ತುಂಬಿಸಬೇಕು ಎಂದು ಒತ್ತಾಯಿಸಿ ಈಗಾಗಲೇ ವಿವಿ ಪುರ ಬಂದ್ ಮಾಡಿ ತಹಶೀಲ್ದಾರ್ ಮೂಲಕ ಸರ್ಕಾರಕ್ಕೆ ಮನವಿ ಪತ್ರ ಸಲ್ಲಿಸ ಲಾಗಿತ್ತು. ಇದುವರೆಗೂ ಇದರ ಬಗ್ಗೆ ಗಮನ ಹರಿಸದೇ ರೈತರನ್ನು ನಿರ್ಲಕ್ಷಿಸಿದ್ದಾರೆ ಎಂದು ದೂರಿದರು.ತಾಲೂಕಿನ ಬೀರೇನಹಳ್ಳಿಯಲ್ಲಿ ವಿವಿ ಪುರ ವ್ಯಾಪ್ತಿಯ ಕೆರೆಗಳಿಗೆ ನೀರು ಹರಿಸುವ ವಿಚಾರವಾಗಿ ಸಭೆ ನಡೆಸಿ ಪಾದಯಾತ್ರೆ ನಡೆಸಲು ತೀರ್ಮಾನಿಸಲಾಯಿತು. ಆದ್ದರಿಂದರೈತ 'ರಚಳುವಳಿಯನ್ನುತೀವ್ರಗೊಳಿಸಲು ಸಭೆಯಲ್ಲಿ ತೀರ್ಮಾನಿಸಲಾಗಿದೆ.

ಸೆ.21ರ ಶನಿವಾರ ಬೆಳಿಗ್ಗೆ 9 ಗಂಟೆಗೆ ವಿವಿ ಪುರದ ಕಣಿವೆ ಮಾರಮ್ಮ ದೇವಸ್ಥಾನದಿಂದ ಪಾದಯಾತ್ರೆ ಪ್ರಾರಂಭಿಸಿ, ಹಿರಿಯೂರು ನಗರದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಿ ತಾಲೂಕು ಕಚೇರಿ ತಲುಪಿ ಮನವಿ ಪತ್ರ ಸಲ್ಲಿಸಲಾಗುವುದು ಎಂದು ತಿಳಿಸಿದರು. ತಾಲೂಕಿನಲ್ಲಿ 30 ಟಿಎಂಸಿ ನೀರು ಸಂಗ್ರಹವಾಗುವ ವಾಣಿವಿಲಾಸ ಜಲಾಶಯವಿದ್ದರೂ ಸಹ ನಮ್ಮ ತಾಲೂಕಿನ ರೈತರಿಗೆ ನೀರು ಇಲ್ಲದೆ ತೋಟಗಳು ಒಣಗುತ್ತಿವೆ. ಕುಡಿಯಲು ಸಹ ನೀರಿನ ಅಭಾವಉಂಟಾಗಿಟ್ಯಾಂಕರ್‌ಮೂಲಕನೀರುತರುವಂತಾಗಿದೆ. ಹಾಗಾಗಿ ರೈತರು ತಮ್ಮ ಬದುಕುಗಳನ್ನು ಬಿಟ್ಟು ಹೋರಾಟ ನಡೆಸುತ್ತಿದ್ದರೆ ಸರ್ಕಾರ ಕಣ್ಣು ಮುಚ್ಚಿ ಕೂತಿದೆ.ಇದು ರೈತ ವಿರೋಧಿ ಸರ್ಕಾರವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಈಪಾದಯಾತ್ರೆಗೆ ಪ್ರತಿ ಹಳ್ಳಿಯಿಂದಲೂ ಮಹಿಳೆಯರು, ರೈತರು ತಂಡೋಪತಂಡವಾಗಿ ಬಂದು ಸೇರಬೇಕು ಎಂದು ಮನವಿ ಮಾಡಿದರು ಸಂಘದ ಕಾರ್ಯದರ್ಶಿ ಸಿದ್ದರಾಮಣ್ಣ ಮಾತನಾಡಿ, ತಾಲೂಕಿನಲ್ಲಿ ಇವು ಅತಿ ಹಿಂದುಳಿದ ಗ್ರಾಮಗಳಾಗಿದ್ದು, ಈ ಭಾಗದ ರೈತರುಜೀವನ ನಡೆಸುವುದು ಕಷ್ಟಕರವಾಗಿದೆ. ಇಲ್ಲಿ ಕೆರೆಗಳೆಲ್ಲಾ ಬತ್ತಿ ಹೋಗಿ ಅಂತರ್ಜಲ ಸಂಪೂರ್ಣ ಕುಸಿತವಾಗಿದೆ. ರೈತರು ಸಂಘಟಿತರಾಗಿ ಈ ಹೋರಾಟದಲ್ಲಿ ಪಾಲ್ಗೊಳ್ಳಬೇಕು ಎಂದು ಮನವಿ ಮಾಡಿದರು.ರೈತ ಮುಖಂಡ ಪಿಜೆ. ತಿಪ್ಪೇಸ್ವಾಮಿ ಮಾತನಾಡಿ, ಸರ್ಕಾರ ಕೂಡಲೇ ರೈತರಿಗೆ ಸ್ಪಂದಿಸಬೇಕು. ಈ ಭಾಗಕ್ಕೆ ನೀರು ಹರಿಸುವ ಕೆಲಸಕ್ಕೆ ಡಿಪಿಆರ್‌ರೆಡಿ ಮಾಡಿ ಸರ್ಕಾರದಿಂದ ಹಣಮಂಜೂರಾತಿ ಮಾಡಿಕಾಮಗಾರಿ ಮುಗಿಸಬೇಕು ಎಂದು ಒತ್ತಾಯಿಸಿದರು.ಈ ಸಂದರ್ಭದಲ್ಲಿ ಬೀರೇನಹಳ್ಳಿ ರಾಮಯ್ಯ, ಪುಟ್ಟಣ್ಣ, ಗ್ರಾಮ ಪಂಚಾಯಿತಿ ಸದಸ್ಯ ಪ್ರಕಾಶಯ್ಯ, ಪಾಂಡಪ್ಪ, ಪಾರ್ವತೇಶ್, ರಾಜಪ್ಪ, ಪಾಂಡುರಂಗಪ್ಪ, ಅರುಣ್, ಕಿರಣ್, ಗೌಡ್ರು ಶಿವಣ್ಣ, ತಿಮ್ಮಣ್ಣ, ಭೂತಾಭೋವಿ ಮುಂತಾದವರು ಹಾಜರಿದ್ದರು.

## ಪ್ರಮುಖ ಸುದ್ದಿ

# ಕ್ರೀಡೆಗಳು ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಸಹಕಾರಿ

» ಚಿತ್ರದುರ್ಗ



ಕ್ರೀಡಾಭೀಮಾನವನ್ನು ಮೂಡಿಸುವ ಮೂಲಕ ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಮುಂದಾಗಬೇಕು, ದೈಹಿಕ, ಮಾನಸಿಕನೆಮ್ಮದಿಗೆಕ್ರೀಡೆಹಾಗೂಯೋಗದ ಅವಶ್ಯಕತೆ ಇದೆ. ಹಿರೇ ಗುಂಟನೂರು ಹೋಬಳಿ ಮಟ್ಟದ ಪ್ರೌಢಶಾಲೆಗಳ ಕ್ರೀಡಾಕೂಟದಲ್ಲಿ ಭಾಗವಹಿಸಿರುವ ಎಲ್ಲಾ ವಿದ್ಯಾರ್ಥಿಗಳಿಗೆ ಶುಭವಾಗಲಿ ಎಂದು ಕ್ಷೇತ್ರ ಸಮನ್ವಯಾಧಿಕಾರಿಗಳಾದ ಸಂಪತ್ ಕುಮಾರ್ ಅವರು ವಿದ್ಯಾರ್ಥಿಗಳಿಗೆ ತಿಳಿಸಿದರು

ಚಿತ್ರದುರ್ಗನಗರದಮುರುಘರಾಜೇಂದ್ರ ಕ್ರೀಡಾಂಗಣದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ಚಿತ್ರದುರ್ಗ ಹಾಗೂ ಶ್ರೀ ಆಂಜನೇಯ ಸ್ವಾಮಿ ಪ್ರೌಢಶಾಲೆ ಕಡ್ಲೇಗುದ್ದು ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಹಿರೇ ಗುಂಟನೂರು ಹೋಬಳಿ ಮಟ್ಟದ ಪ್ರೌಢಶಾಲೆಗಳ ಕ್ರೀಡಾಕೂಟದ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು.

ಕ್ರೀಡೆಗಳಲ್ಲಿ ಭಾಗವಹಿಸಲು ಕ್ರೀಡಾ ಮನೋಭಾವದ ಅವಶ್ಯಕತೆ ಇದೆ. ಮನಸ್ಸು ಶಾಂತಿಗಾಗಿ ಕ್ರೀಡೆ ಬೇಕು. ಕ್ರೀಡೆಗಳು ಕೇವಲ ಬಹುಮಾನ ಗೆಲ್ಲಲು ಅಲ್ಲ. ಮಕ್ಕಳು ಸದಾ ಚಟುವಟಿಕೆಯಿಂದ ಇರುವಂತೆ ನೋಡಿಕೊಳ್ಳಲು ಕ್ರೀಡೆಗಳು ಸಹಕಾರಿ ಎಂದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಜಿಲ್ಲಾ ದೈಹಿಕ ಶಿಕ್ಷಣ ಪರಿವೀಕ್ಷಕರಾದ ಚಿದಾನಂದ ಸ್ವಾಮಿ ಅವರು ಮಾತನಾಡಿ ವಿದ್ಯಾರ್ಥಿಗಳು ಕೇವಲ ಅಂಕಗಳಿಗೆ ಸೀಮಿತವಾಗದೆ ಕ್ರೀಡಾ ಸ್ಪರ್ಧೆಗಳಲ್ಲೂ ಭಾಗವಹಿಸಬೇಕು ಪೀಡೆಗಳಲ್ಲಿ ಅತ್ಯುತ್ತಮ ಪ್ರದರ್ಶನ ತೋರಿದರೆ ರಾಜ್ಯ ರಾಷ್ಟ್ರಮಟ್ಟಕ್ಕೆ ಮಟ್ಟಕ್ಕೆ ಆಯ್ಕೆ ಯಾಗಿ ದೇಶವನ್ನು ಪ್ರತಿನಿಧಿಸುವ ಸೌಭಾಗ್ಯ ನಿಮಗೆ ದೊರಕಲಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಮುಖ್ಯ ಶಿಕ್ಷಕ ಡಾಕ್ಟರ್ ಮಹೇಶ್ ಅವರು ಮಾತನಾಡಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮಾರ್ಗದರ್ಶನದಂತೆ ಹೋಬಳಿ ಮಟ್ಟದ ಕ್ರೀಡಾಕೂಟವನ್ನು ಸಂಘಟಿಸಲಾಗಿದೆ.

ತರಗತಿಯ ಪಾಠಕ್ಕೆ ಹೆಚ್ಚಿನ ಆದ್ಯತೆ ನೀಡಿ ಕ್ರೀಡೆಗಳಿಗೆ ಮನ್ನಣೆ ನೀಡದಂತಹ ಮನಸ್ಥಿತಿಯಿಂದ ನಾವು ಹೊರಬರಬೇಕು ಪೀಡೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಲ್ಲಾ ವಿದ್ಯಾರ್ಥಿಗಳಿಗೆ ಶುಭವಾಗಲಿ ಎಂದರು.

ಕ್ರೀಡಾಕೂಟದ ಸಮಾರಂಭದಲ್ಲಿ ಹಿರೇ ಗುಂಟನೂರು ಹೋಬಳಿಯ 22 ಪ್ರೌಢಶಾಲೆಯ ಸುಮಾರು 800 ವಿದ್ಯಾರ್ಥಿಗಳು ಅತ್ಯುತ್ತಮ ರೀತಿಯಲ್ಲಿ ಪಥ ಸಂಚಲನವನ್ನು ನಡೆಸಿದರು.

ಕ್ರೀಡಾಕೂಟದ ಕಾರ್ಯಕ್ರಮದಲ್ಲಿ ತಾಲೂಕು ದೈಹಿಕ ಶಿಕ್ಷಣ ಪರಿವೀಕ್ಷಕರಾದ ಚನ್ನಬಸಪ್ಪ ಮುಖ್ಯ ಶಿಕ್ಷಕರ ಸಂಘದ ಉಪಾಧ್ಯಕ್ಷರಾದ ಕೀರ್ತಿಕುಮಾರ್, ಪಾಪಣ್ಣ, ಸಹ ಶಿಕ್ಷಕರ ಸಂಘದ ಚನ್ನಯ್ಯನವರು, ದೈಹಿಕ ಶಿಕ್ಷಕ ಸಂಘದ ಅಧ್ಯಕ್ಷರಾದ ಕಲ್ಲೇಶ್ ಮೌರ್ಯ ತಾಲ್ಲೋಕು ಅಧ್ಯಕ್ಷರಾದ ಅಶೋಕ್, ಜಿಲ್ಲಾ ಹಾಗೂ ತಾಲೂಕು ದೈಹಿಕ ಶಿಕ್ಷಣ ಸಂಘದ ಪದಾಧಿಕಾರಿಗಳು ಹಾಜರಿದ್ದರು.

## ಫಾಸ್ಟ್ ನ್ಯೂಸ್

### ಮಾನವ ಸರಪಳಿ: ಜಿಲ್ಲೆಯಲ್ಲಿ ಲಕ್ಷಕ್ಕೂ ಹೆಚ್ಚು ಜನರು ಭಾಗಿ

» ಮೊದಲ ಪುಟದಿಂದ

ಸರ್ಕಾರ ಇದೇ ಮೊದಲ ಬಾರಿಗೆ ಭಾರಿ ಪ್ರಮಾಣದ ಕಾರ್ಯಕ್ರಮ ರೂಪಿಸುವ ಮೂಲಕ ಪ್ರಜಾಪ್ರಭುತ್ವದ ರಕ್ಷಣೆಗೆ ಮುಂದಾಗಿದೆ ಎಂದರು. ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಮಾತನಾಡಿ, ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಪ್ರಜಾಪ್ರಭುತ್ವಕ್ಕಾಗಿ ಮಾನವ ಸರಪಳಿ ನಿರ್ಮಾಣ ಕಾರ್ಯಕ್ರಮ ಜಿಲ್ಲೆಯಲ್ಲಿ ಹೆಚ್ಚು ಯಶಸ್ಸು ಕಾಣಬೇಕಿದೆ. ಪ್ರತಿ ಕಿ.ಮೀಗೆ 850ರಂತೆ ಜನರು ಈ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಅವಕಾಶ ಕಲ್ಪಿಸಿದೆ. ಇದೇ ಸೆ.15ರಂದು ಭಾನುವಾರ ಬೆಳಗ್ಗೆ ಈ ಕಾರ್ಯಕ್ರಮ ಆರಂಭವಾಗಲಿದ್ದು, ಮಾನವ ಸರಪಳಿ ನಿರ್ಮಿಸುವವರಿಗೆ ಜಿಲ್ಲಾಡಳಿತದಿಂದ ಅಗತ್ಯ ಮುಂಜಾಗ್ರತೆ ಕ್ರಮ ವಹಿಸಲಾಗುವುದು ಎಂದರು. ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಸಿಇಒ ಸೋಮಶೇಖರ್, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ, ತಹಶೀಲ್ದಾರ್ ರೇಹಾನ್ ಪಾಷ, ಇಒ ಶಶಿಧರ, ನಗರಸಭೆ ಅಧ್ಯಕ್ಷೆ ಜೈತುಂಬಿ, ಉಪಾಧ್ಯಕ್ಷೆ ಸುಜಾತ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

### ಪಚ್ಚಬಾಳೆ ಸಸಿ ಲಭ್ಯ

» ದಾವಣಗೆರೆ

ಪ್ರಸಕ್ತಸಾಲಿನಲ್ಲಿಜಿಲ್ಲೆಯತೋಟಗಾರಿಕೆಇಲಾಖೆಯ ಸಮಗ್ರ ಜೈವಿಕ ಕೇಂದ್ರದಲ್ಲಿ ಜಿ–9(ಪಚ್ಚಬಾಳೆ) ತಳಿಯ ಅಂಗಾಂಶ ಬಾಳೆಸಸಿಗಳನ್ನು ತಯಾರು ಮಾಡಿ ಇಲಾಖಾ ದರದಲ್ಲಿ ಮಾರಾಟ ಮಾಡಲಾಗುತ್ತಿದೆ. ಉತ್ತಮ ಗುಣಮಟ್ಟದ ಅಂಗಾಂಶ ಬಾಳೆಸಸಿಗಳು ಪ್ರತಿ ಸಸಿಗೆ ರೂ.11 ರಂತೆ ಮಾರಾಟಕ್ಕೆ ಲಭ್ಯವಿರುತ್ತದೆ. ಆಸಕ್ತ ರೈತರು ಅಶ್ವಿನಿ ಡಿ.ಆರ್ ಮೊ.ಸಂ:8197954070 ಇವರನ್ನು ಸಂಪರ್ಕಿಸಲು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರಾದ ವೀರಭದ್ರಸ್ವಾಮಿತಿಳಿಸಿದ್ದಾರೆ.

### ಏಕಗವಾಕ್ಷಿ ಸಮಿತಿ ಸಭೆ

» ದಾವಣಗೆರೆ

ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸೆಪ್ಟೆಂಬರ್ 10 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಏಕಗವಾಕ್ಷಿ ಸಭೆಯನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

### ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ

» ದಾವಣಗೆರೆ

ಪ್ರಸಕ್ತ ಸಾಲಿನ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯನ್ನು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಶಾಮನೂರು ಟಿ. ಬಸವರಾಜ್ ಇವರ ಅಧ್ಯಕ್ಷತೆಯಲ್ಲಿ ಸೆಪ್ಟೆಂಬರ್ 10 ರಂದು ಮಧ್ಯಾಹ್ನ 3 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆಯಲಿದೆ ಎಂದು ಸುರೇಶ್ ಬಿ ಇಟ್ನಾಳ್ ತಿಳಿಸಿದ್ದಾರೆ.

### ಹಿರೇಹಳ್ಳಿ: ಜನಾನೂರಾಗಿ ಮುಖಂಡ, ಜಮೀನ್ದಾರ್ ಮುರುಗೇಂದ್ರಯ್ಯ ನಿಧನ

» ಚಳ್ಳಕೆರೆ



ತಾಲ್ಲೂಕಿನ ಹಿರೇಹಳ್ಳಿ ಗ್ರಾಮದ ಜಮೀನ್ದಾರ್, ಜನಾನೂರಾಗಿ ಮುಖಂಡ ಬಿ.ಎಂ.ಮುರುಗೇಂದ್ರಯ್ಯ(85) ಸೋಮವಾರ ತಮ್ಮ ಮನೆಯಲ್ಲೇ ನಿಧನರಾಗಿರುತ್ತಾರೆ. ಮೃತರು ಪತ್ನಿ, ಪುತ್ರಿ, ನಾಲ್ವರು ಪುತ್ರರು ಹಾಗೂ ಅಪಾರಬಂಧು ಬಳಗವನ್ನು ಅಗಲಿದ್ದಾರೆ. ಮೃತ ಸುದ್ದಿ ತಿಳಿದ ಗ್ರಾಮಸ್ಥರು ಅವರ ಮನೆಗೆ ತೆರಳಿ ಅಂತಿಮ ದರ್ಶನ ಪಡೆದರು. ಸೋಮವಾರ ಸಂಜೆ ಗ್ರಾಮದ ಅವರ ಜಮೀನಿನಲ್ಲಿ ಅಂತ್ಯಕ್ರಿಯೆ ನಡೆಯಿತು.

### ವ್ಯಕ್ತಿ ಕಾಣೆ: ಪತ್ತೆಗೆ ಮನವಿ

» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕಿನ ಕಳ್ಳಿಹಟ್ಟಿ ಗ್ರಾಮದ ನಿವಾಸಿ ರಮೇಶ್ ತಂದೆ ಹನುಮಂತಪ್ಪ (ಸು.46ವರ್ಷ) ಅವರು ಕಾಣೆಯಾದ ಕುರಿತು ಚಿತ್ರದುರ್ಗ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಕಾಣೆಯಾದ ರಮೇಶ, ಸು.5.5 ಅಡಿ ಎತ್ತರ, ಎಣ್ಣೆಗೆಂಪು ಮೈಬಣ್ಣ, ಸಾಧಾರಣ ಮೈಕಟ್ಟು, ತಲೆಯಲ್ಲಿ ಸು.2.5ಇಂಚು ಉದ್ದದ ಕಪ್ಪು ಕೂದಲು, ಬಲಭಾಗದ ಕಣ್ಣಿನ ಮೇಲೆ ಹಳೇ ಗಾಯದ ಗುರುತು ಇದ್ದು, ಕನ್ನಡ ಮತ್ತು ತೆಲುಗು ಭಾಷೆ ಮಾತನಾಡುವರು. ಮನೆಯಿಂದ ಹೋಗುವಾಗ ನೀಲಿ ಬಣ್ಣದ ಶರ್ಟ್ ಮತ್ತು ಬಿಳಿ ನೀಲಿ ಮಿಶ್ರಿತ ಬಣ್ಣದ ಪಂಚೆ ಧರಿಸಿರುತ್ತಾನೆ. ಈ ಮೇಲ್ಕಂಡ ವ್ಯಕ್ತಿಯ ಕುರಿತು ಮಾಹಿತಿ ಕಂಡು ಬಂದಲ್ಲಿ ಚಿತ್ರದುರ್ಗ ಗ್ರಾಮಾಂತರ ಪೊಲೀಸ್ ಠಾಣೆಯನ್ನು ಸಂಪರ್ಕಿಸಬಹುದು.ಎಂದು ಗ್ರಾಮಾಂತರ ಪೊಲೀಸ್ ಠಾಣೆಯ ಸಬ್ ಇನ್‌ಸ್ಪೆಕ್ಟರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---

### ಸೆಪ್ಟೆಂಬರ್ 15ರ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ

# ಮಾನವ ಸರಪಳಿ ಮಾಡಿ ಸಂವಿಧಾನ ಜಾಗೃತಿ

» ದಾವಣಗೆರೆ

ಅಂತರಾಷ್ಟೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ರಾಜ್ಯಾದ್ಯಂತ ಬೀದರ್‌ನಿಂದ ಚಾಮರಾಜನಗರ ವರೆಗೆ ಏಕಕಾಲಕ್ಕೆ ಮಾನವ ಸರಪಳಿ ನಿರ್ಮಿಸಲಿದ್ದು ದಾವಣಗೆರೆ ಜಿಲ್ಲೆಯಲ್ಲಿ 80 ಕಿ.ಮೀ ಉದ್ದಗಲದಲ್ಲಿ ಮಾನವ ಸರಪಳಿ ನಿರ್ಮಾಣ ಮಾಡಿ ಸಂವಿಧಾನ ಜಾಗೃತಿ ಮೂಡಿಸಲಾಗುತ್ತದೆ ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದರು.

ಅವರು ಸೋಮವಾರ ಜಿಲ್ಲಾಧಿಕಾರಿ ಕಚೇರಿಯ ತುಂಗಭದ್ರಾ ಸಭಾಂಗಣದಲ್ಲಿ ಅಂತಾರಾಷ್ಟೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಸಂಘ, ಸಂಸ್ಥೆ ಪದಾಧಿಕಾರಿಗಳು, ಅಧಿಕಾರಿಗಳೊಂದಿಗೆ ನಡೆದ ಪೂರ್ವಭಾವಿ ಸಿದ್ದತಾ ಸಭೆಯಲ್ಲಿ ಮಾತನಾಡಿದರು.

ಅಂತಾರಾಷ್ಟೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ರಾಜ್ಯ ಸರ್ಕಾರ ಬಹಳ ವಿನೂತನವಾದ ಕಾರ್ಯಕ್ರಮ ಹಮ್ಮಿಕೊಂಡಿದೆ. ಚಾಮರಾಜನಗರದಿಂದ ಬೀದರ್ ವರೆಗೂ ಮಾನವ ಸರಪಳಿ ನಿರ್ಮಾಣ ಮಾಡುವ ಮೂಲಕ ಬೃಹತ್ ಸಂವಿಧಾನ ಜಾಗೃತಿ ಮೂಡಿಸುವ ಕಾರ್ಯಕ್ರಮ ಇದಾಗಿದ್ದು ಇದರ ಸಂಪೂರ್ಣ ಮ್ಯಾಪನ್ನು ಗೂಗಲ್ ನಿರ್ವಹಿಸಲಿದೆ ಎಂದರು.



ಸೆಪ್ಟೆಂಬರ್ 15 ರ ಬೆಳಿಗ್ಗೆ 8.30 ರಿಂದ 9.30 ವರೆಗೆ ಮಾನವ ಸರಪಳಿ ಕಾರ್ಯಕ್ರಮ ನಡೆಯಲಿದ್ದು ದಾವಣಗೆರೆ ಜಿಲ್ಲೆಯ ಗಡಿ ತಾಲ್ಲೂಕು ನ್ಯಾಮತಿಯ ಟಿ.ಗೋಪಗೊಂಡನಹಳ್ಳಿಯಿಂದ ಹರಿಹರ ಪಟ್ಟಣ ಸೇರಿದಂತೆ ರಾಣೆಬೆನ್ನೂರು ಗಡಿ ಕೋಡಿಯಾಲದವರೆಗೆ ಸುಮಾರು 80 ಕಿ.ಮೀ ಉದ್ದದ ಮಾನವ ಸರಪಳಿ ಇದಾಗಿದೆ ಎಂದರು.

ಜಿಲ್ಲೆಯ ಎಲ್ಲಾ ಶಾಲಾ, ಕಾಲೇಜಿನ ವಿದ್ಯಾರ್ಥಿಗಳು, ಸಂಘ ಸಂಸ್ಥೆಯ ಪ್ರತಿನಿಧಿಗಳು, ಸಾರ್ವಜನಿಕರು, ಮಹಿಳೆಯರು, ಸ್ವಸಹಾಯ ಸಂಘದವರು ಸೇರಿದಂತೆ ಸಾವಿರಾರು ಪ್ರತಿನಿಧಿಗಳು ಭಾಗವಹಿಸುತ್ತಿದ್ದು ಆಸಕ್ತ ಸಾರ್ವಜನಿಕರು ತಮಗೆ ಹತ್ತಿರವಾಗುವ ಸ್ಥಳದಲ್ಲಿ ಭಾಗಿಯಾಗಬಹುದು. ಪ್ರತಿ 100 ಮೀಟರ್ ಗೆ ಒಬ್ಬ ಶಿಕ್ಷಕರು, ಪ್ರತಿ ಕಿಲೋಮೀಟರ್ ಗೆ ಒಬ್ಬರಂತೆ ಅಧಿಕಾರಿಗಳನ್ನು ಉಸ್ತುವಾರಿಗಾಗಿ ನೇಮಕ ಮಾಡಲಾಗುತ್ತದೆ. ಸಂಘ, ಸಂಸ್ಥೆಯವರು ಕಲಾವಿದರ ಬಳಕೆ ಮಾಡಿಕೊಳ್ಳಬೇಕೆಂದು ಮಾಡಿದ ಮನವಿಗೆ ಸ್ವಯಂಪ್ರೇರಿತರಾಗಿ ಕಲಾವಿದರೂ ಭಾಗವಹಿಸಬಹುದಾಗಿದೆ ಎಂದರು.

ಸಂವಿಧಾನ ಸರಪಳಿ ಆಯೋಜನೆಯು ಪ್ರಜಾಪ್ರಭುತ್ವದ ಹಬ್ಬವಾಗಿದ್ದು, ವಿವಿಧ ಸಾಂಸ್ಕೃತಿಕ,ಕಲಾತಂಡಗಳ,ಸಂಘಸಂಸ್ಥೆಗಳ ಸಹಭಾಗಿತ್ವದೊಂದಿಗೆ ಕಾರ್ಯಕ್ರಮದಲ್ಲಿ ಸಸಿಗಳನ್ನು ನೆಡಲಾಗುವುದು ಎಂದು ಅವರು ಕಾರ್ಯಕ್ರಮದಲ್ಲಿ ಭಾಗವಹಿಸುವ ಆಸಕ್ತರು https://www.democracydaykarnataka.in/registration ಲಿಂಕ್ ಮೂಲಕ ನೊಂದಾಯಿಸ ಬಹುದಾಗಿದೆ ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ರಕ್ಷಣಾಧಿಕಾರಿ ಉಮಾ ಪ್ರಶಾಂತ್, ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ ಇಟ್ನಾಳ್, ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್, ಮಹಾನಗರ ಪಾಲಿಕೆ ಆಯುಕ್ತರಾದ ರೇಣುಕಾ, ಉಪ ವಿಭಾಗಾಧಿಕಾರಿ ಸಂತೋಷ ಪಾಟೀಲ್, ಹೊನ್ನಳ್ಳಿ ಉಪವಿಭಾಗಾಧಿಕಾರಿ ಅಭಿಷೇಕ್ , ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರಾದ ನಾಗರಾಜ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು

---

### ಪ್ರಧಾನಮಂತ್ರಿ ಸುರಕ್ಷಿತ ಮಾತೃತ್ವ ಅಭಿಯಾನದಲ್ಲಿ ಟಿಹೆಚ್ಒ ಡಾ.ಬಿ.ವಿ.ಗಿರೀಶ್

# ಕಬ್ಬಿಣದ ಕೊರತೆ ನೀಗಿಸಿ ಸುರಕ್ಷಿತ ತಾಯ್ತನ ಪಡೆಯಿರಿ

» ಚಿತ್ರದುರ್ಗ

ಗರ್ಭಿಣಿಯರು ಕಬ್ಬಿಣಾಂಶದ ಕೊರತೆ ನೀಗಿಸಿಕೊಂಡು ಸುರಕ್ಷಿತ ಪಡೆಯಬೇಕು ಎಂದು ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ಹಾಯ್ಕಲ್ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಸೋಮವಾರ ಜರುಗಿದ ಪ್ರಧಾನಮಂತ್ರಿ ಸುರಕ್ಷಿತ ಮಾತೃತ್ವ ಅಭಿಯಾನದಲ್ಲಿ ಅವರು ಮಾತನಾಡಿದರು



ಗರ್ಭಿಣಿ ಆರೈಕೆಯಲ್ಲಿ ಕಬ್ಬಿಣಾಂಶ ಕೊರತೆಯಿಂದ ಹಿಮೋಗ್ಲೋಬಿನ್ ಪ್ರಮಾಣ ಕಡಿಮೆಯಾಗಿ ರಕ್ತ ಹೀನತೆ ಉಂಟಾಗುತ್ತದೆ. ಹಿಮೋಗ್ಲೋಬಿನ್ 7 ಗ್ರಾಂಗಿಂತ ಕಡಿಮೆ ಇರುವ ಗರ್ಭಿಣಿಯರಿಗೆ ರಕ್ತವನ್ನು ನೀಡಲಾಗುತ್ತದೆ. 7 ಗ್ರಾಂ ಮೇಲೆ 10 ಗ್ರಾಂ ಹಿಮೋಗ್ಲೋಬಿನ್ ಪ್ರಮಾಣವಿರುವ ಗರ್ಭಿಣಿಯರಿಗೆ ಕನಿಷ್ಠ 10 ಡೋಸ್ ಐರನ್ ಸುಕ್ರೋಸ್ ಇಂಜೆಕ್ಷನ್ ಮೂಲಕ ಕಬ್ಬಿಣದ ಕೊರತೆ ನೀಗಿಸಿ ಹಿಮೋಗ್ಲೋಬಿನ್ ಪ್ರಮಾಣ ಹೆಚ್ಚಿಸಲಾಗುತ್ತದೆ ಎಂದರು.

ಸಾಮಾನ್ಯ ಗರ್ಭಿಣಿಯರಿಗೆ ಕಬ್ಬಿಣಾಂಶ ಮತ್ತು ಫೋಲಿಕ್ ಆಮ್ಲದ ಮಾತ್ರೆಗಳ ಪೂರೈಕೆ ಮಾಡಿ ಕನಿಷ್ಠ 12 ಗ್ರಾಂನಷ್ಟು ಹಿಮೋಗ್ಲೋಬಿನ್ ಇರುವಂತೆ ನಿರ್ವಹಣೆ ಮಾಡಲಾಗುತ್ತದೆ. ಪ್ರಧಾನಮಂತ್ರಿ ಸುರಕ್ಷಿತ ಮಾತೃತ್ವ ಅಭಿಯಾನದಲ್ಲಿ ಪಾಲ್ಗೊಂಡ ಗರ್ಭಿಣಿಯರು ಕಬ್ಬಿಣಾಂಶದ ಕೊರತೆ ನಿಗಿಸಿಕೊಂಡು ಸುರಕ್ಷಿತ ತಾಯ್ತತನ ಪಡೆಯಿರಿ ಎಂದು ಸಲಹೆ ನೀಡಿದರು. ತಾಲ್ಲೂಕು ಆರೋಗ್ಯಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ ತಾಯಿ ಕಾರ್ಡ್‍ನ ಮಹತ್ವ ತಿಳಿಸಿ, ನಿಮ್ಮ ತಾಯಿ ಕಾರ್ಡ್‍ನ ಪುಟ 7 ಮತ್ತು 8ರಲ್ಲಿ ತಾವುಗಳು ತಮ್ಮ ಗರ್ಭಾವಸ್ಥೆಯಲ್ಲಿ 8 ಬಾರಿಯಾದರೂ ಪ್ರಧಾನಮಂತ್ರಿ ಸುರಕ್ಷಿತ ಮಾತೃತ್ವ ಅಭಿಯಾನದಲ್ಲಿ ಭಾಗವಹಿಸಿ ತಪಾಸಣೆ ಮಾಡಿಸಿಕೊಳ್ಳಿ. ಹೆರಿಗೆ ಸಮಯದಲ್ಲಿ ಉಂಟಾಗುವ ತೊಂದರೆಗಳನ್ನು ಮುಂಚಿತವಾಗಿ ಪತ್ತೆಹಚ್ಚಲು ಸೂಕ್ತ ಚಿಕಿತ್ಸೆ ಪಡೆಯಲು ಸಹಕರಿಸಿ. ಗರ್ಭಿಣಿ ಬಾಣಂತಿ ಸೇವೆಯನ್ನು ಸರ್ಕಾರ ಉಚಿತವಾಗಿ ಒದಗಿಸುತ್ತದೆ. ಯೋಜನೆಯ ಸದುಪಯೋಗ ಪಡೆದುಕೊಳ್ಳಿ ಎಂದು ಹೇಳಿದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಮಾತನಾಡಿ, ಅಂತರದ ಹೆರಿಗೆ ಕುಟುಂಬ ಕಲ್ಯಾಣ ಯೋಜನೆಗಳನ್ನು ಪರಿಚಯಿಸಿ, ಪೌಷ್ಟಿಕ ಆಹಾರ ಸೇವನೆ ಬಗ್ಗೆ ತಿಳಿಸಿದರು. ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ.ಹರ್ಷ ಮಾತನಾಡಿ, ಗರ್ಭಿಣಿ ಬಾಣಂತಿ ಆರೈಕೆ ಮತ್ತು ಸುರಕ್ಷಿತ ಹೆರಿಗೆ ಉಚಿತವಾಗಿ ಆರೋಗ್ಯ ಕೇಂದ್ರದಲ್ಲಿ ಉಚಿತವಾಗಿ ನೀಡಲಾಗುತ್ತಿದೆ ಎಂದರು. ಒಟ್ಟ 44 ಗರ್ಭಿಣಿಯರಿಗೆ ಉಚಿತ ರಕ್ತ ಪರೀಕ್ಷೆ, ಮಧುಮೇಹ ಪರೀಕ್ಷೆ ರಕ್ತದೊತ್ತಡ ಪರೀಕ್ಷೆ ನಡೆಸಿ ಪ್ರೋಟೀನ್ ಪೌಡರ್, ಕಬ್ಬಿಣಾಂಶ ಮಾತ್ರೆ, ಕ್ಯಾಲ್ಸಿಯಂ ಮಾತ್ರೆ ನೀಡಲಾಯಿತು.

ಅಭಿಯಾನದಲ್ಲಿ ಫಾರ್ಮಸಿ ಅಧಿಕಾರಿ ಸತೀಶ್, ಪ್ರಯೋಗ ಶಾಲಾ ತಂತ್ರಜ್ಞಾಧಿಕಾರಿ ಉಷಾ, ನರ್ಸಿಂಗ್ ಅಧಿಕಾರಿ ಮಧು, ಸಮುದಾಯ ಆರೋಗ್ಯಾಧಿಕಾರಿ ಪಾಲಯ್ಯ, ಆರೋಗ್ಯ ಸುರಕ್ಷತಾಧಿಕಾರಿಗಳಾದ ರೇಖಾ, ಶ್ರೀ ಮತಿ, ಆರೋಗ್ಯ ನಿರೀಕ್ಷಣಾಧಿಕಾರಿಗಳಾದಅವಿನಾಶ್, ಪ್ರವೀಣ್, ಗರ್ಭಿಣಿಯರು, ಪೋಷಕರು ಇತರರು ಇದ್ದರು.

---

# ಪೋಷಕಾಂಶ ಮಾಸಾಚರಣೆ



» ಚಿತ್ರದುರ್ಗ

ಹೊಳಲ್ಕೆರೆ ತಾಲ್ಲೂಕು ಬಿ.ದುರ್ಗ ಗ್ರಾಮದ ಕಾಶಿ ಮಹಾಲಿಂಗ ಪ್ರೌಢಶಾಲೆಯಲ್ಲಿ ಸೋಮವಾರ ಪೋಷಕಾಂಶ ಮಾಸಾಚರಣೆ ಹಾಗೂ ಕಾನೂನು ಅರಿವು ನೆರವು ಕಾರ್ಯಕ್ರಮ ನಡೆಯಿತು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಹೊಳಲ್ಕೆರೆ ತಾಲ್ಲೂಕು ಶಿಶು ಅಭಿವೃದ್ಧಿ ಯೋಜನೆ, ಜಿಲ್ಲಾ ಮಹಿಳಾ ಸಬಲೀಕರಣ ಘಟದ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾದ ಕಾರ್ಯಕ್ರಮದಲ್ಲಿ ಲಿಂಗ ವಿಷಯ ತಜ್ಞೆ ಗೀತಾ.ಡಿ ಶಾಲಾ ಮಕ್ಕಳಿಗೆ ಮತ್ತು ಪೋಷಕರಿಗೆ ಬಾಲ್ಯ ವಿವಾಹ ನಿಷೇಧ ಕಾಯ್ದೆ ಮತ್ತು ಪೋಕ್ಸೋ ಕಾಯ್ದೆಯ ಅರಿವು ಮೂಡಿಸಿದರು.ಬಾಲ್ಯ ವಿವಾಹ, ಬಾಲಕಾರ್ಮಿಕರ ಬಾಲ ತಾಯಂದಿರು, ಮಕ್ಕಳ ಮೇಲಿನ ದೌರ್ಜನ್ಯ ತಡೆಗಾಗಿ ಮಕ್ಕಳ ಸಹಾಯವಾಣಿ ಸಂಖ್ಯೆ 1098 ಕರೆ ಮಾಡುವಂತೆ ತಿಳಿಸಿದರು. ಮಕ್ಕಳಿಗೆ ಸುರಕ್ಷಿತ ಸ್ಪರ್ಶ ಅಸುರಕ್ಷಿತ ಸ್ಪರ್ಶದ ಕುರಿತು ತಿಳಿ ಹೇಳಿದರು. ಶಿಕ್ಷಣದ ಮಹತ್ವದ ಬಗ್ಗೆ ಮನವರಿಕೆ ಮಾಡಿಕೊಟ್ಟರು. ಇದೇ ಸಂದರ್ಭದಲ್ಲಿ ಮಕ್ಕಳಿಗೆ ಅಗ್ನಿ ರಹಿತ ಅಡುಗೆ ಮಾಡುವುದನ್ನು ಪ್ರದರ್ಶಿಸಲಾಯಿತು. ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷರು ಮತ್ತು ಸದಸ್ಯರು ಉಪಸ್ಥಿತರಿದ್ದರು.

### ಮಹಾರಾಷ್ಟ್ರ ಮೂಲದ ಕಾರ್ಮಿಕ ಸಾವು: ಜಿಲ್ಲಾ ರಕ್ಷಣಾಧಿಕಾರಿ ಭೇಟಿ

**ಚಳ್ಳಕೆರೆ:** ತಾಲ್ಲೂಕಿನ ತಳಕು ಠಾಣಾ ವ್ಯಾಪ್ತಿಯ ಕಾಲುವೇಹಳ್ಳಿಯ ಹೊರವಲಯದಲ್ಲಿ ಇದ್ದಿಲು ಸುಡಲು ಮಹಾರಾಷ್ಟ್ರದಿಂದ ಆಗಮಿಸಿದ್ದ



ವಲಸೆ ಕಾರ್ಮಿಕರು ಅಲ್ಲೇ ಟೆಂಟ್ ಹಾಕಿಕೊಂಡು ಇದ್ದಿಲು ಸುಡುವ ಕೆಲಸವನ್ನು ಹಗಲುರಾತ್ರಿ ಮಾಡುತ್ತಿದ್ದರು. ಭಾನುವಾರ ರಾತ್ರಿ ಕೆಲಸ ಮುಗಿದನಂತರ ಗಂಡ, ಹೆಂಡತಿ ಹರಿಶ್ಚಂದ್ರಪ್ಪ ಮತ್ತು ಯಶೋಧಮ್ಮ ಯಾವುದೋ ವಿಚಾರಕ್ಕಾಗಿ ಇಬ್ಬರಲ್ಲೂ ಮಾತಿನಚಕುಮುಕಿ ಆರಂಭವಾಗಿ ಜಗಳ ವಿಕೋಪಕ್ಕೆ ಹೋಗಿ ಇಬ್ಬರು ಪರಸ್ಪರ ಹೊಡೆದಾಡಿಕೊಂಡಿದ್ದು, ಅಸ್ವಸ್ಥರಾದ ಇಬ್ಬರನ್ನೂ ಅಂಬ್ಯುಲೆನ್ಸ್‌ನಲ್ಲಿ ಚಳ್ಳಕೆರೆ ಸಾರ್ವಜನಿಕ ಆಸ್ಪತ್ರೆ ಸೋಮವಾರ ಬೆಳಗಿನ ಜಾವ ದಾಖಲಿಸಿದ್ದು, ಹೆಚ್ಚಿನ ಚಿಕಿತ್ಸೆಗಾಗಿ ಜಿಲ್ಲಾ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆಸ್ಪತ್ರೆಗೆ ದಾಖಲಿಸಿದ ಕೆಲವೆ ಗಂಟೆಗಳಲ್ಲಿ ಹರಿಶ್ಚಂದ್ರಪ್ಪ ಮೃತಪಟ್ಟಿದ್ದು, ಹೆಂಡತಿ ಯಶೋಧಮ್ಮ ಅರೆಪ್ರಜ್ಞಾ ವ್ಯವಸ್ಥೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾಳೆ. ಸ್ಥಳಕ್ಕೆ ಭೇಟಿ ನೀಡಿದ್ದ ಪೊಲೀಸರಿಗೆ ಹರಿಶ್ಚಂದ್ರಪ್ಪನ ಸಾವಿಗೆ ಕಾರಣವೇನು ಎಂಬುವುದು ತಿಳಿದುಬಂದಿಲ್ಲ. ಹೊಡೆದಾಟದಿಂದ ಸಾವು ಸಂಭವಿಸಿದೇಯೇ ಅಥವಾ ಯಾರಾದರೂ ಮಧ್ಯ ಪ್ರವೇಶಿಸಿ ಮಾರಣಾಂತಿಕ ಹಲ್ಲೆ ನಡೆಸಿದ್ದಾರೇ ಎಂಬ ಬಗ್ಗೆ ಪೊಲೀಸ್‌ರು ವಿಚಾರಣೆ ನಡೆಸುತ್ತಿದ್ದಾರೆ. ಘಟನೆ ನಡೆದ ಸ್ಥಳಕ್ಕೆ ಎಸ್ಪಿ ರಂಜಿತ್‌ಕುಮಾರ್ ಬಂಡಾರು, ಡಿವೈಎಸ್ಪಿ ಟಿ.ಬಿ.ರಾಜಣ್ಣ, ವೃತ್ತ ನಿರೀಕ್ಷಕ ಹನುಮಂತಶಿರೇಹಳ್ಳಿ, ಪಿಎಸ್‌ಐ ಲೋಕೇಶ್ ಭೇಟಿ ನೀಡಿದ್ದರು. ತಳಕು ಪೊಲೀಸರು ಪ್ರಕರಣ ದಾಖಲಿಸಿದ್ದಾರೆ.

---

# ವಾಸವಿ ಕ್ಲಬ್‌ನಿಂದ ಪತ್ರಕರ್ತ ಮುತ್ತುಸ್ವಾಮಿಗೆ ಸನ್ಮಾನ

» ಚಿತ್ರದುರ್ಗ

ಪತ್ರಕರ್ತ ಕೆ.ಎಂ.ಮುತ್ತಸ್ವಾಮಿ(ಕಣ್ಣನ್) ಇವರು 35 ವರ್ಷಗಳಿಂದಲೂ ಪತ್ರಿಕೋದ್ಯಮದಲ್ಲಿ ನಿರಂತರವಾಗಿ ಸೇವೆ ಸಲ್ಲಿಸುತ್ತಿರುವುದನ್ನು ಗುರುತಿಸಿ ವಾಸವಿ ಮಹಲ್ ರಸ್ತೆಯಲ್ಲಿರುವ ಕನ್ಯಕಾ ಪರಮೇಶ್ವರಿ ದೇವಸ್ಥಾನದಲ್ಲಿ ವಾಸವಿ ಕ್ಲಬ್ ಚಿತ್ರದುರ್ಗ ಫೋರ್ಟ್ ವತಿಯಿಂದ ಸೋಮವಾರ ಸನ್ಮಾನಿಸಿ ಗೌರವಿಸಲಾಯಿತು.

ವಾಸವಿ ಕ್ಲಬ್ ಫೋರ್ಟ್‌ನಿಂದ ವಿಶ್ವಾದ್ಯಂತ ನಡೆಯುವ ವಾಸವಿ ವೀಕ್ ಡೇ ಕಾರ್ಯಕ್ರಮದ ಅಂಗವಾಗಿ ಗೌರವಿಸಲಾಯಿತು.ವಾಸವಿ ಕ್ಲಬ್ ಚಿತ್ರದುರ್ಗ ಫೋರ್ಟ್ ಅಧ್ಯಕ್ಷ ಕೋಟೇಶ್ವರ ಗುಪ್ತ ಮಾತನಾಡುತ್ತ ಪತ್ರಿಕೋದ್ಯಮದಲ್ಲಿ ಶಿಸ್ತು ಮತ್ತು ಬದ್ದತೆಯಿಂದ ಕೆಲಸ ಮಾಡುತ್ತಿರುವ ಕೆ.ಎಂ.ಮುತ್ತುಸ್ವಾಮಿ ಎಲ್ಲರಿಗೂ ಚಿರಪರಿಚಿತರು.




ಪತ್ರಿಕೋದ್ಯಮವನ್ನೆ ವೃತ್ತಿಯನ್ನಾಗಿಸಿಕೊಂಡಿರುವ ಇವರ ಸೇವೆ ನಿರಂತರವಾಗಿರಬೇಕಾದರೆ ಕನ್ಯಕಾ ಪರಮೇಶ್ವರಿಯ ಕೃಪೆಯಿರಲಿ ಎಂದು ಹಾರೈಸಿದರು.ವಾಸವಿ ಕ್ಲಬ್ ಚಿತ್ರದುರ್ಗ ಫೋರ್ಟ್ ಖಜಾಂಚಿ ಸತ್ಯನಾರಾಯಣಗುಪ್ತ ದೊಂತಿ, ಆರ್ಯವೈಶ್ಯ ಸಂಘದ ಸಹ ಕಾರ್ಯದರ್ಶಿ ಕೆ.ಎಸ್.ಮಂಜುನಾಥಶೆಟ್ಟಿ, ವಾಸವಿ ಕ್ಲಬ್ ಚಿತ್ರದುರ್ಗ ಫೋರ್ಟ್ ನಿರ್ದೇಶಕರು ಹಾಗೂ ಸದಸ್ಯರುಗಳಾದ ಅವಿನಾಶ್, ಚಂದ್ರಮೋಹನ್ ಎಂ.ಎಸ್. ಸಂತೋಷ್, ಜ್ಯೋತಿ ಲಕ್ಷ್ಮಣ್, ಎಸ್.ಪಿ.ಶ್ರೀನಿವಾಸ್ ಇನ್ನಿತರರು ಈ ಸಂದರ್ಭದಲ್ಲಿ ಹಾಜರಿದ್ದರು.

---

## ಪ್ರಮುಖ ಸುದ್ದಿ

# ನಾಗಪ್ಪನ ಹಳ್ಳಿ ಗೇಟ್‌ನಲ್ಲಿ ಮೂಲ ಸೌಕರ್ಯಗಳಿಗಾಗಿ ಪ್ರತಿಭಟನೆ

» ಪರಶುರಾಂಪುರ

ಚಳ್ಳಕೆರೆ – ಪಾವಗಡ ಮುಖ್ಯರಸ್ತೆಯಲ್ಲಿ ಬರುವ ಸಿದ್ದೇಶ್ವರನದುರ್ಗಗ್ರಾಪಂಯ ನಾಗಪ್ಪನಹಳ್ಳಿ ಗೇಟ್ ನಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವಂತೆ ಒತ್ತಾಯಿಸಿ ಅಖಂಡಕರ್ನಾಟಕರಾಜ್ಯರೈತ ಸಂಘದ ಪದಾಧಿಕಾರಿಗಳು, ಪ್ರಗತಿಪರರು, ಗ್ರಾಮಸ್ಥರು,ಸಾರ್ವಜನಿಕರು ಸದರಿಗ ೇಟ್‌ನಲ್ಲಿರಸ್ತೆತಡೆಯೊಂದಿಗೆ ಪ್ರತಿಭಟನೆ ನಡೆಸಿದರು.ಗೇಟ್ ನಲ್ಲಿಕುಡಿಯುವ ನೀರು, ಶೌಚಾಲಯಜತೆತಂಗುದಾಣದ ವ್ಯವಸ್ಥೆಇಲ್ಲದೆಪ್ರಯಾಣಿಕರು,ಸಾರ್ವಜಿಕರು ಪರದಾಡುವಂತಾಗಿದೆ.ಇಲ್ಲಿನ ನಿವಾಸಿಗಳಿಗೆ ಚರಂಡಿ ವ್ಯವಸ್ಥೆ,ಬೀದಿ ದೀಪ ಸಹಾ ಇಲ್ಲ ದೆಎಲ್ಲೆಂದರಲ್ಲಿಕಸದತಾಣವಾಗಿದೆಎಂದು ಪ್ರಗತಿಪರ , ಸಾಮಾಜಿಕ ಹೋರಾಟಗಾರ ಪಿಲ್ಲಹಳ್ಳಿ ಚಿತ್ರಲಿಂಗಪ್ಪ ತಿಳಿಸಿದರು.




ಇಲ್ಲಿರಸ್ತೆಅಗಲೀಕರಣವಾಗದೇಅಪಘಾತ ವಲಯದ ವಿಷಯವಾಗಿದ್ದು, ಯಾವುದೇ ಮುನ್ಸೂಚನೆ ಫಲಕಗಳನ್ನ ಅಳವಡಿಸದೇ ಇರುವುದು.ಇಲ್ಲಿನ ಸಾರ್ವಜನಿಕತಂಗುದಾಣಒತ್ತುವರಿಯಾಗಿರಸ್ತೆಯಲ್ಲಿಕಾಯುವ ಪರಿಸ್ಥಿತಿ ನಿರ್ಮಾಣವಾಗಿದೆ. ನಾಗಪ್ಪನಹಳ್ಳಿ ಗೇಟ್ ನೆರೆ ಸೀಮಾಂಧ್ರ ಹಾಗೂ ರಾಜ್ಯ ಸಂಪರ್ಕಕಲ್ಪಿಸುವಜಂಕ್ಷನ್‌ಆಗಿದೆ. ಇಷ್ಟಲ್ಲದೇ ವಾರದ ಸೀತೆಯು ಸಹಾ ರಸ್ತೆಯಲ್ಲಿ ನಡೆಯುವುದರಿಂದಜೀವಭಯದಿಂದ ವ್ಯಾಪಾರ ಮಾಡುವ ಸಂದರ್ಭದಲ್ಲಿ ವ್ಯಾಪಾರಿಗಳು.ಇವೆಲ್ಲ ಮೂಲಭೂತ ಸೌಕರ್ಯಗಳನ್ನ ಒದಗಿಸುವ ನಿಟ್ಟಿನಲ್ಲಿ ಸಂಬಂಧ ಪಟ್ಟ ಅಧಿಕಾರಿಗಳ ಕೂಡಲೇ ಕ್ರಮವಹಿಸಿ ಜನರಿಗೆ ಅನುಕೂಲವಾಗ ುವಂತೆಕಲ್ಪಿಸಬೇಕೆಂದು ಮನವಿ ಜತೆ ಒತ್ತಾಯಿಸಿದರು.

ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ಬೃಹತ್ ಪ್ರತಿಭಟನೆಜತೆಅಹೋರಾತ್ರಿಧರಣಿ ನಡೆಸಲಾಗುವುದುಎಂದರು.

ಈ ವೇಳೆಯಲ್ಲಿ ಅ.ಕ.ರಾ.ರೈತ ಸಂಘದ ಕಾರ್ಯದರ್ಶಿ ಚೌಳೂರು ಪ್ರಕಾಶ್, ಹೆ ೋರಾಟಗಾರರಚಿತ್ರಲಿಂಗಪ್ಪ,ವೆಂಕ ಟರಮಣಪ್ಪ, ರಾಮಮೂರ್ತಿ, ಪ್ರಹ್ಲಾದ್, ವೀರಭದ್ರಪ್ಪ,ದುರುಗಪ್ಪ, ರವೀಂದ್ರನಾಥ ಶೆಟ್ಟಿ, ಮಾರುತಿ, ಮಂಜುನಾಥ್, ಯ ೋಗೇಶ್,ವಾರುತೇಶ್,ರತ್ನಮ್ಮ,ಶಿವ ಣ್ಣ, ಪಿಎ[illegible] ಬಸವರಾಜು, ಪೊಲೀಸ್ ಸಿಬ್ಬಂದಿ ಸೇರಿದಂತೆಇನ್ನಿತರರುಇದ್ದರು.

## ಫಾಸ್ಟ್ ನ್ಯೂಸ್

### ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದಲ್ಲಿನ ಹಳೇ ಕಡತಗಳ ನಾಶಕ್ಕೆ ಕ್ರಮ

» **ದಾವಣಗೆರೆ**

ಚಿತ್ರದುರ್ಗ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದಲ್ಲಿ 2015 ನೇ ಸಾಲಿನಿಂದ 2019 ನೇ ಸಾಲಿನವರೆಗೆ ಅವಧಿ ಮೀರಿದ ಗ್ರಾಹಕರ ವ್ಯಾಜ್ಯಗಳ ಅಮಾಲ್ಜಾರಿ ಅರ್ಜಿಗಳು ಹಾಗೂ ಸಂಕೀರ್ಣ ಅರ್ಜಿಗಳ ಕಡತಗಳನ್ನು ನಿಯಮಾನುಸಾರ ನಾಶಗೊಳಿಸಲು ಕ್ರಮಕೈಗೊಳ್ಳಬೇಕಾಗಿರುವುದರಿಂದ ಈ ಕಡತದಲ್ಲಿರುವ ಮೂಲ ದಾಖಲೆ ಹಾಗೂ ಆದೇಶದ ದಾಖಲೆಗಳನ್ನು ಈ ಸುತ್ತೋಲೆ ಹೊರಡಿಸಿದ ದಿನಾಂಕದಿಂದ ಎರಡು ತಿಂಗಳ ಅವಧಿಯೊಳಗೆ ಹಿಂಪಡೆದುಕೊಳ್ಳುವಂತೆ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಸಹಾಯಕ ಆಡಳಿತಾಧಿಕಾರಿ ಹಾಗೂ ಸಹಾಯಕ ರಿಜಿಸ್ಟ್ರಾರ್ ತಿಳಿಸಿದ್ದಾರೆ.

### ಆಕ್ಷೇಪಣೆಗಳಿಗೆ ಅರ್ಜಿ ಆಹ್ವಾನ

» **ದಾವಣಗೆರೆ**

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘದ ವತಿಯಿಂದ ರಾಷ್ಟ್ರೀಯ ಆರೋಗ್ಯ ಅಭಿಯಾನದ ಕಾರ್ಯಕ್ರಮಗಳಡಿ ಪ್ರಸಕ್ತ ಸಾಲಿನಲ್ಲಿ ಮಂಜೂರಾಗಿ ಖಾಲಿ ಇರುವ ಎನ್‌ಪಿಪಿಸಿ ಕಾರ್ಯಕ್ರಮ,ತಾಯಿ ಆರೋಗ್ಯ ಕಾರ್ಯಕ್ರಮ ಮಕ್ಕಳ ಆರೋಗ್ಯ ಕಾರ್ಯಕ್ರಮ ಮತ್ತು ಐಸಿಯು, ಹೆಚ್‌ಡಿಯು ಕಾರ್ಯಕ್ರದಡಿ ಶುಶ್ರೂಷಕಿಯರ ಹುದ್ದೆಗಳು, ಜಿಲ್ಲಾ ಆಸ್ಪತ್ರೆಯ ಗುಣಮಟ್ಟ ವ್ಯವಸ್ಥಾಪಕರು, ಜಿಲ್ಲಾ ಆಸ್ಪತ್ರೆಯ ಗುಣಮಟ್ಟ ವ್ಯವಸ್ಥಾಪಕರು, ಶಾಲಾ ಆರೋಗ್ಯ ತಂಡದ ವೈದ್ಯಾಧಿಕಾರಿಗಳು ಹಾಗೂ ನೇತ್ರ ಸಹಾಯಕರು, ಪಂಚಕರ್ಮ ಥೆರಾಪಿಸ್ಟ್ ಹುದ್ದೆಗಳಿಗೆ ಜುಲೈ 30 ರಂದು ನೇರ ಸಂದರ್ಶನ ಏರ್ಪಾಡಿಸಿಲಾಗಿತ್ತು. ಈ ನೇರ ಸಂದರ್ಶನದಲ್ಲಿ ಆಯ್ಕೆಯಾದ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಗಳನ್ನು ಸೆ.9 ರಂದು ಕಚೇರಿಯ ಪ್ರಕಟಣಾ ಫಲಕದಲ್ಲಿ ಪ್ರಕಟಿಸಲಾಗಿದೆ. ಈ ಆಯ್ಕೆ ಪಟ್ಟಿಗೆ ಯಾವುದೇ ಆಕ್ಷೇಪಣೆಗಳಿದ್ದಲ್ಲಿ, ದಾಖಲೆಗಳ ಜೊತೆಗೆ ಲಿಖಿತ ಆಕ್ಷೇಪಣೆಗಳನ್ನು ಪ್ರಕಟಣೆಗೊಂಡ 14 ದಿನಗಳೊಳಗೆ ಎನ್ ಹೆಚ್ ಎಂ ವಿಭಾಗಕ್ಕೆ ಸಲ್ಲಿಸಲು ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಆರಾಧ್ಯ ತಿಳಿಸಿದ್ದಾರೆ.

### ಮ್ಯಾರಥಾನ್ ಸ್ಪರ್ಧೆ

» **ದಾವಣಗೆರೆ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕರ್ನಾಟಕ ರಾಜ್ಯ ಏಡ್ಸ್ ನಿಯಂತ್ರಣ ಸೊಸೈಟಿ, ಬೆಂಗಳೂರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ಪ್ರತಿಬಂಧಕ ಮತ್ತು ನಿಯಂತ್ರಣ ಘಟಕ, ರಕ್ತ ಕೇಂದ್ರ, ಚಿಗಟೇರಿ ಜಿಲ್ಲಾ ಆಸ್ಪತ್ರೆ, ಶಾಲಾ ಶಿಕ್ಷಣ ಇಲಾಖೆ, ಯುವಜನ ಮತ್ತು ಕ್ರೀಡಾ ಇಲಾಖೆ, ಎನ್.ಎಸ್.ಎಸ್. ಮತ್ತು ಜಿಲ್ಲೆಯ ವಿವಿಧ ರಕ್ತ ಕೇಂದ್ರಗಳು, ಜಿಲ್ಲಾ ಆರ್.ಆರ್.ಸಿ. ಕಾಲೇಜುಗಳು ಹಾಗೂ ವಿವಿಧ ಸ್ವಯಂ ಸೇವಾ ಸಂಘ ಸಂಸ್ಥೆಗಳು, ದಾವಣಗೆರೆ, ಇವರುಗಳ ಸಂಯುಕ್ತಾಶ್ರಯದಲ್ಲಿ ಸೆಪ್ಟೆಂಬರ್ 10 ರಂದು ಬೆಳಿಗ್ಗೆ 7 ಗಂಟೆಗೆ ನಗರದ ಸಿ.ಜಿ.ಆಸ್ಪತ್ರೆ ಮುಂಭಾಗದಲ್ಲಿ ಮ್ಯಾರಥಾನ್ ಸ್ಪರ್ಧೆಯನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮವನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಷಣ್ಮುಖಪ್ಪ. ಎಸ್ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಚಿಗಟೇರಿ ಆಸ್ಪತ್ರೆಯ ಅಧೀಕ್ಷಕರಾದ ಡಾ.ನಾಗೇಂದ್ರಪ್ಪ, ಮಹಿಳಾ ಮತ್ತು ಮಕ್ಕಳ ಆಸ್ಪತ್ರೆಯ ಅಧೀಕ್ಷಕರಾದ ಡಾ.ಮಧು.ಎಸ್.ಪಿ, ನಿವಾಸಿ ವೈದ್ಯಾಧಿಕಾರಿ ಡಾ.ಎಸ್.ಕೆ ನಾಗವೇಣಿ, ಜಿಲ್ಲಾ ಏಡ್ಸ್ ಪ್ರತಿಬಂಧಕ ಮತ್ತು ನಿಯಂತ್ರಣ ಘಟಕದ ಜಿಲ್ಲಾ ಕಾರ್ಯಕ್ರಮ ಅಧಿಕಾರಿ ಡಾ.ಪಿ.ಡಿ.ಮುರುಳೀಧರ್, ಎ.ಆರ್.ಟಿ ಪ್ಲಸ್ ಕೇಂದ್ರದ ನೋಡೆಲ್ ಅಧಿಕಾರಿ ಡಾ.ಕೆ.ಶಿವರಾಜ್, ರಕ್ತ ಕೇಂದ್ರ ವೈದ್ಯಾಧಿಕಾರಿ ಡಾ.ಡಿ.ಹೆಚ್ ಗೀತಾ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಕೊಟ್ರೇಶ.ಜಿ, ವಿಶ್ವವಿದ್ಯಾನಿಲಯದ ಜಿಲ್ಲಾ ಎನ್.ಎಸ್.ಎಸ್ ಸಂಯೋಜಕರಾದ ಡಾ.ಅಶೋಕ್.ವಿ.ಪಾಳೇದ್ ಭಾಗವಹಿಸುವರು.

### ಕುಡಿದ ಅಮಲಿನಲ್ಲಿ ನೇಣು ಹಾಕಿಕೊಂಡು ವ್ಯಕ್ತಿ ಆತ್ಮಹತ್ಯೆ

» **ಹೊಸದುರ್ಗ**


ಪಾನಮತ್ತನಾಗಿದ್ದ ವ್ಯಕ್ತಿಯೋರ್ವ ಕುಡಿದ ಅಮಲಿನಲ್ಲಿ ಮರಕ್ಕೆ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೋಂಡಿರುವ ಘಟನೆ ತಾಲೂಕಿನ ಶೀರನಕಟ್ಟೆ ಸಮೀಪ ವಿರುವ ಕೋಡಿಹಳ್ಳಿ ಹಟ್ಟಿ ಗ್ರಾಮದಲ್ಲಿ ಜರುಗಿದೆ.

ಮೃತನನ್ನು ತಾಲೂಕಿನ ಮಾಡದಕರೆ ಹೋಬಳಿ ಶೀರನಕಟ್ಟೆ ಸಮೀಪವಿರುವ ಕೋಡಿಹಳ್ಳಿ ಹಟ್ಟಿ ಗ್ರಾಮದ ಲೇಟ್ ನಾಗರಾಜಪ್ಪ ಎಂಬುವರ ಪುತ್ರ ಮಂಜುನಾಥ (37) ಕುಡಿದ ಅಮಲಿನಲ್ಲಿ ತನ್ನ ಮನೆಯ ಹಿಂಭಾಗದ ಹುಣಸೆ ಮರಕ್ಕೆ ಸೆ.8 ರಂದು ಭಾನುವಾರ ನೇಣು ಹಾಕಿಕೋಂಡು ಆತ್ಮಹತ್ಯೆ ಮಾಡಿಕೊಂಡಿದ್ದು ಈ ಬಗ್ಗೆ ಹೊಸದುರ್ಗ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ನಗರದ ವಿವಿದೆಡೆ ಪ್ರತಿಷ್ಠಾಪಿಸಲಾಗಿರುವ ಗಣೇಶನ ಮೂರ್ತಿಗಳು








**ಚಿತ್ರದುರ್ಗ:** ವಿಘ್ನಗಳ ನಿವಾರಕ ವಿನಾಯಕ ಚತುರ್ಥಿ ಪ್ರಯುಕ್ತ ನಗರದ ವಿವಿದೆಡೆ ಬಗೆ ಬಗೆಯ ಗಣೇಶ ಮೂರ್ತಿಯನ್ನು ಪ್ರತಿಷ್ಠಾಪಿಸಿ ಶ್ರದ್ಧಾಭಕ್ತಿಯಿಂದ ಪೂಜೆ ಸಲ್ಲಿಸಲಾಗುತ್ತಿದೆ.ಜೋಗಿಮಟ್ಟಿ ರಸ್ತೆಯಲ್ಲಿರುವ ಫ್ರೆಂಡ್ಸ್ ಗಣಪತಿ ಒಂದು ಕೈಯಲ್ಲಿ ಚಕ್ರ ಹಾಗೂ ಮತ್ತೊಂದು ಕೈಯಲ್ಲಿ ಶಂಖ ಹಿಡಿದು ಭಕ್ತರ ಗಮನ ಸೆಳೆಯುತ್ತಿದೆ. ಕರುವಿನಕಟ್ಟೆ ವೃತ್ತದಲ್ಲಿ ಮಹಾರಾಜ್ ಗಣಪ ಭಕ್ತರನ್ನು ಆಕರ್ಷಿಸುತ್ತಿದೆ. ಹೊಳಲ್ಕೆರೆ ರಸ್ತೆಯಲ್ಲಿ ಸ್ನೇಹ ಜೀವಿ ಬಳಗದಿಂದ ಪ್ರತಿಷ್ಠಾಪನೆಗೊಂಡಿರುವ ಗಣಪತಿ ಕೈಯಲ್ಲಿ ಕತ್ತಿ ಹಿಡಿದು ರಾರಾಜಿಸುತ್ತಿದೆ. ಮತ್ತೊಂದು ಗಣಪ ತಲೆಗೆ ಪೇಟ ಸುತ್ತಿಕೊಂಡು ವಿರಾಜಮಾನವಾಗಿರುವುದು ಮತ್ತೊಂದು ವಿಶೇಷ. ನಗರದೆಲ್ಲೆಡೆ ಅಲ್ಲಲ್ಲಿ ಪ್ರತಿಷ್ಠಾಪಿಸಲಾಗಿರುವ ಗಣೇಶ ಮೂರ್ತಿಗೆ ದಿನವೂ ಒಂದೊಂದು ಬಗೆಯ ಪ್ರಸಾದದ ನೈವೇದ್ಯವಿರಿಸಿ ಪೂಜಿಸಲಾಗುತ್ತಿದೆ. ವಿಶ್ವಹಿಂದೂ ಪರಿಷತ್, ಭಜರಂಗದಳದ ವತಿಯಿಂದ ಪ್ರತಿಷ್ಠಾಪಿಸಲಾಗಿರುವ ಗರುಡಾವಳಿ ಗಣಪನನ್ನು ಕಣ್ತುಂಬಿಕೊಳ್ಳಲು ದಿನವೂ ಬೆಳಗಿನಿಂದ ಸಂಜೆಯತನಕ ಸಾವಿರಾರು ಭಕ್ತರು ಧಾವಿಸುತ್ತಿದ್ದಾರೆ. ಅಲ್ಲಲ್ಲಿ ಭಜನೆ, ಸುಗಮ ಸಂಗೀತ, ಜಾನಪದ ನೃತ್ಯಗಳು ಮೇಳೈಸುತ್ತಿವೆ.

## ಕ್ಷಯರೋಗಿಗಳಿಗೆ ಪೌಷ್ಠಿಕ ಆಹಾರ ಕಿಟ್ ವಿತರಣೆ

» **ಚಳ್ಳಕೆರೆ**

ಪ್ರತಿಯೊಬ್ಬ ವ್ಯಕ್ತಿಯೂ ಯಾವುದೇ ರೋಗದಿಂದ ಬಳಲುವ ರೋಗಿಗಳಿಗೆ ಹಲವಾರು ರೀತಿಯ ವ್ಯವಸ್ಥೆಗಳನ್ನು ಹಾಗೂ ಸಹಕಾರವನ್ನು ನೀಡಬೇಕಾಗುತ್ತಿದೆ. ರೋಗಪೀಡಿತರನ್ನುನಿರ್ಲಕ್ಷ್ಯ ಮಾಡುವುದು ಸರಿಯಲ್ಲ. ಅಂತಹವರ ಬಗ್ಗೆ ವಿಶೇಷ ಗಮನವನ್ನು ಎಲ್ಲರೂ ಹರಿಸಬೇಕೆಂದು ಗೋಪನಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ರಾಧಮ್ಮತಿಪ್ಪೇಸ್ವಾಮಿ ತಿಳಿಸಿದರು.

ಅವರು, ಗೋಪನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕ್ಷಯರೋಗಕ್ಕೆ ಚಿಕಿತ್ಸೆ ಪಡೆಯುತ್ತಿರುವವರನ್ನು ದತ್ತು ಪಡೆದು ಅವರಿಗೆ ಮುಂದಿನ ಆರು ತಿಂಗಳ ಕಾಲ ಪೌಷ್ಠಿಕ ಆಹಾರದ ಕಿಟ್ ವಿತರಣೆ ಮಾಡಿ ಮಾತನಾಡಿದರು.

ಪ್ರತಿಯೊಂದು ಹಂತದಲ್ಲೂ ಕ್ಷಯರೋಗಿಗಳಿಗೆ ಸರ್ಕಾರವೇ ಎಲ್ಲಾ ಸೌಲಭ್ಯವನ್ನು ನೀಡಲು ಸಾಧ್ಯವಿಲ್ಲ ಈ ಕಾರ್ಯ ಬೇರೆಯವರಿಗೆ ಪ್ರೇರಣೆಯಾಗಲಿ ಎಂದರು.

ಇದೇ ಸಂದರ್ಭದಲ್ಲಿ ನಗರಂಗೆರೆ, ದೊಡ್ಡೇರಿ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಸದಸ್ಯರೂ ಸಹ ತಮ್ಮ ವ್ಯಾಪ್ತಿಯ ಕ್ಷಯರೋಗಿಗಳಿಗೆ ಪೌಷ್ಠಿಕ ಆಹಾರ ಕಿಟ್ ನೀಡುವ ಭರವಸೆ ನೀಡಿದರು.



ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಆರೋಗ್ಯಾಧಿಕಾರಿ ಡಾ.ಬಿಂದುಶ್ರೀ, ಇದೊಂದು ಉತ್ತಮ ಕಾರ್ಯ, ವಿಶೇಷವಾಗಿ ಕ್ಷಯರೋಗಕ್ಕೆ ತುತ್ತಾದವರು ಪೌಷ್ಠಿಕ ಆಹಾರದ ಬಗ್ಗೆ ಚಿಂತನೆ ಪಡುವುದು ಸ್ವಾಭಾವಿಕ. ಗ್ರಾಮ ಪಂಚಾಯಿತಿ ಅಧ್ಯಕ್ಷರು ಹಾಗೂ ಸದಸ್ಯರು ಪೌಷ್ಠಿಕ ಆಹಾರ ನೀಡುವ ಮೂಲಕ ಎಲ್ಲಾ ಕ್ಷಯರೋಗಿಗಳಿಗೆ ಆತ್ಮಸ್ಥೈರ್ಯ ತುಂಬಿದ್ದಾರೆಂದರು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಸದಸ್ಯರಾದಶಿವಣ್ಣ,ಬೋರಯ್ಯಡಾ.ರಾಘವೇಂದ್ರ, ಸಿದ್ದೇಶ್, ಶಾವುಲ್ ಅಮೀದ್, ರಂಜಿತಾ, ಮಮತ, ಎಚ್.ತಿಪ್ಪೇಸ್ವಾಮಿ, ಆಶಾ, ಗೌರಮ್ಮ ಮುಂತಾದವರು ಭಾಗವಹಿಸಿದ್ದರು.

## ಇಂಡಿಯನ್ ಇಂಟರ್ ನ್ಯಾಷನಲ್ ಸ್ಕೂಲ್‌ನ ಗಣೇಶಮೂರ್ತಿ ವಿಸರ್ಜನೆ



» **ಚಿತ್ರದುರ್ಗ**

ಚಳ್ಳಕೆರೆ ಟೋಲ್‌ಗೇಟ್ ಸಮೀಪವಿರುವ ಇಂಡಿಯನ್ ಇಂಟರ್‌ನ್ಯಾಷನಲ್ ಸ್ಕೂಲ್‌ನಲ್ಲಿ ಪ್ರತಿಷ್ಠಾಪಿಸಲಾಗಿದ್ದ ಗಣೇಶ ಮೂರ್ತಿಯನ್ನು ಸೋಮವಾರ ವಿಸರ್ಜಿಸಲಾಯಿತು.

ಇಂಡಿಯನ್ ಇಂಟರ್ ನ್ಯಾಷನಲ್ ಸ್ಕೂಲ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಂ.ಸಿ.ರಘುಚಂದನ್ ಗಣಪತಿ ವಿಸರ್ಜನಾ ಮೆರವಣಿಗೆಗೆ ಚಾಲನೆ ನೀಡಿ ಮಾತನಾಡುತ್ತ ಗಣಪತಿಯನ್ನು ಏಕದಂತ, ವಿಘ್ನಗಳ ನಿವಾರಕ, ಕರಿಮುಖ ಗಣಪ, ವಕ್ರತುಂಡ ಹೀಗೆ ನಾನಾ ಹೆಸರುಗಳಿಂದ ಪೂಜಿಸಲಾಗುತ್ತದೆ. ಯಾವುದೇ ಶುಭ ಸಮಾರಂಭ ನಿರ್ವಿಘ್ನವಾಗಿ ನಡೆಯಬೇಕಾದರೆ ಮೊದಲ ಪೂಜೆ ಸಲ್ಲುವುದೇ ಗಣಪನಿಗೆ. ಹಾಗಾಗಿ ವಿನಾಯಕನನ್ನು ಶ್ರದ್ಧಾಭಕ್ತಿಯಿಂದ ಪೂಜಿಸಬೇಕೆಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಪರಿಸರವನ್ನು ಸ್ವಚ್ಚವಾಗಿ ಕಾಪಾಡಬೇಕಾಗಿರುವುದರಿಂದ ನಗರಸಭೆ ವಿಸರ್ಜನೆಗೆ ಎಲ್ಲೆಲ್ಲಿ ಸ್ಥಳ ನಿಗಧಿಪಡಿಸಿದೆಯೋ ಅಂತಹ ಕಡೆಯಲ್ಲೆ ಗಣೇಶ ಮೂರ್ತಿಯನ್ನು ವಿಸರ್ಜಿಸಬೇಕೆಂದು ಎಂ.ಸಿ.ರಘುಚಂದನ್ ಹೇಳಿದರು.ಇಂಡಿಯನ್ ಇಂಟರ್‌ನ್ಯಾಷನಲ್ ಸ್ಕೂಲ್‌ನಪ್ರಾಂಶುಪಾಲರು ಹಾಗೂ ಸಿಬ್ಬಂದಿಯವರು ವಿಸರ್ಜನೆಯಲ್ಲಿದ್ದರು.

### ಸೆ.23 ರಿಂದ ಅ.23 ರವರೆಗೆ ಒಂದು ತಿಂಗಳ ಪ್ರಮಾಣಪತ್ರ ಕೋರ್ಸ್

## ಬೇಕರಿ ಉತ್ಪನ್ನಗಳ ಕುರಿತು ಕೌಶಲ್ಯಾಭಿವೃದ್ಧಿ ತರಬೇತಿ

» **ಚಿತ್ರದುರ್ಗ**

ಹಿರಿಯೂರು ತಾಲ್ಲೂಕಿನ ಬಬ್ಬೂರು ಫಾರಂನ ಕೃಷಿ ವಿಜ್ಞಾನ ಕೇಂದ್ರದಲ್ಲಿ ಸ್ಥಾಪಿಸಿರುವ ಬೇಕರಿ ಘಟಕದಲ್ಲಿ ವಿವಿಧ ಬೇಕರಿ ಉತ್ಪನ್ನಗಳಾದ ಬೆಣ್ಣೆ ಬಿಸ್ಕತ್, ರಾಗಿ ಬಿಸ್ಕತ್, ಕೊಬ್ಬರಿ ಬಿಸ್ಕತ್, ಫ್ರೂಟ್ ಕೇಕ್, ಪ್ಲೇನ್ ಕೇಕ್, ಹನಿ ಕೇಕ್, ಬ್ರೆಡ್, ಬನ್, ಖಾರ ಬನ್, ದಿಲ್ ಪಸಂದ್, ಸಿರಿಧಾನ್ಯಗಳ ಬಿಸ್ಕತ್ ಹಾಗೂ ಇನ್ನಿತರ ಉತ್ಪನ್ನಗಳ ತಯಾರಿಕೆಯ ಕುರಿತು ಇದೇ ಸೆ.23 ರಿಂದ ಅಕ್ಟೋಬರ್ 23 ರವರೆಗೆ ಒಂದು ತಿಂಗಳ ಪ್ರಮಾಣ ಪತ್ರ ಕೋರ್ಸ್ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮ ಆಯೋಜಿಸಲಾಗಿದೆ.

ತರಬೇತಿಯಲ್ಲಿಭಾಗವಹಿಸಲುಇಚ್ಚೆಯುಳ್ಳವರು ತರಬೇತಿ ಶುಲ್ಕ ರೂ.3000/- ಪಾವತಿಸಿ, ಇದೇ ಸೆಪ್ಟೆಂಬರ್ 20ರೊಳಗಾಗಿ ದೂರವಾಣಿ ಮುಖಾಂತರ ಅಥವಾ ಖುದ್ದಾಗಿ ಸಂಪರ್ಕಿಸಿ ಹೆಸರು ನೊಂದಾಯಿಸಬಹುದಾಗಿದೆ. ಮೊದಲು ನೊಂದಾಯಿಸಿದವರಿಗೆ ಮೊದಲ ಆದ್ಯತೆ ನೀಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಹಿರಿಯೂರು ತಾಲ್ಲೂಕು ಬಬ್ಬೂರು ಫಾರಂ ಕೃಷಿ ವಿಜ್ಞಾನ ಕೇಂದ್ರದ ಗೃಹ ವಿಜ್ಞಾನಿ ಡಾ. ಜೆ.ಎಂ.ಸರಸ್ವತಿ ಅವರ ಮೊಬೈಲ್ ಸಂಖ್ಯೆಗೆ 9986647124 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.



**ಚಳ್ಳಕೆರೆಯ ಶಾಂತಿನಗರದ ಶಕ್ತಿಬಾಲಗಣೇಶ ಯುವಕ ಸಂಘದಿಂದ 10ನೇ ವರ್ಷದ ಗಣೇಶೋತ್ಸವ ವಿಸರ್ಜನೆ ಕಾರ್ಯಕ್ರಮ ಸೋಮವಾರ ನಡೆಯಿತು. ಡಾ.ಜೆ.ಡಿ.ವೆಂಕಟೇಶ್, ನೇತಾಜಿಪ್ರಸನ್ನ, ಬಿ.ಫರೀದ್‌ಖಾನ್, ಸಿ.ಬೋಜರಾಜ, ಕೆ.ಮುರುಳಿ ಮೊದಲಾದವರು ಇದ್ದರು.**

## ಹೊಸದುರ್ಗದಲ್ಲಿ ಪ್ರತಿಷ್ಠಾಪನೆಗೊಂಡ 68 ನೇ ವರ್ಷದ ಗಣೇಶ ಮೂರ್ತಿ



**ಹೊಸದುರ್ಗ ಪಟ್ಟಣದ ಗಣೇಶ ಸದನದಲ್ಲಿ 68 ನೇ ವರ್ಷದ ಗಣೇಶೋತ್ಸವದ ಅಂಗವಾಗಿ ಗಣಪತಿ ಪ್ರತಿಷ್ಠಾಪನೆ ಮಾಡಲಾಗಿದ್ದು ಧರ್ಮಸ್ಥಳ ಮಂಜುನಾಥಸ್ವಾಮಿ ಹಾಗೂ ಅಣ್ಣಪ್ಪ ಸ್ವಾಮಿ ದೇಗಲು ಮಾದರಿ ಕಣ್ಮನ ಸೆಳೆಯುವಂತಿದೆ.**

**ಪ್ರಮುಖ ಸುದ್ದಿ**

# ತಾಲ್ಲೂಕು ಮಟ್ಟದ ಕ್ರೀಡಾಕೂಟದಲ್ಲಿ ಬಾಪೂಜಿ ಸಂಯುಕ್ತ ಪದವಿಪೂರ್ವ ಕಾಲೇಜಿನ ಆಟಗಾರರಿಗೆ ಪ್ರಥಮ ಸ್ಥಾನ

» **ಚಳ್ಳಕೆರೆ**

ಇತ್ತೀಚಿನ ದಿನಗಳಲ್ಲಿ ಕ್ರೀಡಾ ಕ್ಷೇತ್ರವೂ ಸಹ ತನ್ನದೇಯಾದ ಪರಂಪರೆಯನ್ನು ಉಳಿಸಿಕೊಳ್ಳುವಲ್ಲಿ ಸಫಲವಾಗಿದೆ. ವಿಶೇಷವಾಗಿ ಚಳ್ಳಕೆರೆ ತಾಲ್ಲೂಕಿನ ಕ್ರೀಡಾಪಟುಗಳು ಅಂತರಾಷ್ಟ್ರೀಯ ಮಟ್ಟದಲ್ಲೂ ತಮ್ಮ ಛಾಪು ಮೂಡಿಸಿದ್ದಾರೆ. ತಾಲ್ಲೂಕು ಮಟ್ಟದ ಕ್ರೀಡಾಕೂಟದಲ್ಲಿ ಬಾಪೂಜಿ ವಿದ್ಯಾಸಂಸ್ಥೆಯ ವಿದ್ಯಾರ್ಥಿಗಳು ಮೂರು ಪಂದ್ಯಗಳಲ್ಲಿ ಜಯಗಳಿಸುವ ಮೂಲಕ ಕ್ರೀಡಾ ಕ್ಷೇತ್ರದಲ್ಲೂ ಬಾಪೂಜಿವಿದ್ಯಾಸಂಸ್ಥೆ ಶಕ್ತಿಶಾಲಿಯಾಗಿದೆ ಎಂಬುವುದನ್ನು ನಿರೂಪಿಸಿದ್ದಾರೆಂದು ಬಾಪೂಜಿ ವಿದ್ಯಾಸಂಸ್ಥೆ ಆಡಳಿತಾಧಿಕಾರಿ ಜಿ.ಬಾಲರೆಡ್ಡಿ ಸಂತಸ ವ್ಯಕ್ತಪಡಿಸಿದರು.

ಅವರು, ಕಾಲೇಜಿನಲ್ಲಿ ಇತ್ತೀಚೆಗೆ ತಾಲ್ಲೂಕು ಮಟ್ಟದಲ್ಲಿ ವಿಜೇತರಾದ ಖೋ-ಖೋ, ವಾಲಿಬಾಲ್, ಕಬಡ್ಡಿ ಪಂದ್ಯಗಳಲ್ಲಿ ವಿಜೇತರಾದ




ಆಟಗಾರರನ್ನುಅಭಿನಂದಿಸಿಮಾತನಾಡಿದರು.ಎಲ್ಲಾ ಆಟಗಳಲ್ಲೂ ಬಾಪೂಜಿ ಸಂಯುಕ್ತ ಪದವಿಪೂರ್ವ ಕಾಲೇಜಿನ ಆಟಗಾರರು ಪ್ರಥಮ ಸ್ಥಾನದಲ್ಲಿ ವಿಜೇತರಾಗಿ ಪ್ರಶಸ್ತಿ ಪಡೆದಿದ್ದಾರೆ. ಮುಂದಿನ ದಿನಗಳಲ್ಲೂ ಸಹ ನಮ್ಮ ಸಂಸ್ಥೆಯ ಆಟಗಾರರು ಇದೇ ರೀತಿ ಉತ್ತಮ ಆಟವನ್ನು ಎಲ್ಲಾ ವಿಭಾಗದಲ್ಲಿ ತಂದುಕೊಡಲಿ ಎಂದು ಪ್ರಾರ್ಥಿಸುವೆ ಎಂದರು.

ಪ್ರಾಂಶುಪಾಲ ಸತೀಶ್‌ಚಂದ್ರರೆಡ್ಡಿ ಮಾತನಾಡಿ, ದೈಹಿಕಶಿಕ್ಷಕರಾದಜಯಶೀಲರೆಡ್ಡಿ,ಉಪನ್ಯಾಸಕರಾದ ಈರಣ್ಣ, ಜಗದೀಶ್, ಅಶ್ವಥ್‌ರೆಡ್ಡಿ, ಸಾದ್ದಿಕ್, ಉಮೇಶ್ ಮುಂತಾದವರು ವಿಜಯ ಸಾಧಿಸಿದ ಕ್ರೀಡಾಪಟುಗಳ ಸಾಧನೆಯ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು. ರೇಖಾ, ಮುರುಳಿ, ನಾಗರಾಜು, ರಘು, ಶಬ್ಬಿರ್, ಚಂದ್ರಶೇಖರ್, ಮಹಲಿಂಗಪ್ಪ, ಚಂದ್ರಣ್ಣ, ರಾಜೇಶ್, ಸಿದ್ದಿಕ್, ಪಂಕಜಾಕ್ಷಿ, ಸಂತೋಷ್, ಪಾಂಡುರಂಗಪ್ಪ, ಕದರಪ್ಪ, ಪಾಪಣ್ಣ ಮುಂತಾದವರು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T